ಸಂಪುಟ : 10 ಸಂಚಿಕೆ: 300 ಪುಟ : 4+2 ಬೆಲೆ: 3.00 ಬುಧವಾರ ಜನವರಿ 14 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 300 Pages : 4+2 Price : 3.00 Wednesday January 14 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಸಿದ್ಧರಾಮೇಶ್ವರ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಶಿವಯೋಗಿ ಸಿದ್ಧ ರಾಮೇಶ್ವರರ ಜಯಂತಿಯನ್ನು ಜನವರಿ 14 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಮತ್ತು ಸಾಂಕೇತಿಕವಾಗಿ ಪುಷ್ಪಾರ್ಚನೆ ಮೂಲಕ ಆಚರಿಸಲಾಗುತ್ತಿದೆ. ಜಯಂತಿ ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಭಾಗವಹಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2025-26ನೇ ಜನವರಿ ಆವೃತ್ತಿಯ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಯ ಪ್ರಕ್ರಿಯೆ ಆರಂಭಿಸಿದ್ದು, ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್ ಗಳಾದ ಬಿ.ಎ. ಬಿ.ಕಾಂ. ಬಿ.ಲಿಬ್, ಬಿ.ಬಿ.ಎ. ಬಿ.ಸಿ.ಎ. ಬಿ.ಎಸ್ಸಿ, ಬಿ.ಎಸ್.ಡಬ್ಲ್ಯೂ, ಎಂ.ಎ. ಎಂ.ಎ-ಪತ್ರಿಕೋದ್ಯಮ. ಎಂ.ಕಾಮ್, ಎಂ.ಬಿ.ಎ, ಎಂ.ಲಿಬ್, ಎಂ.ಎಸ್ಸಿ, ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ ಹಾಗೂ ಡಿಪ್ಲೊಮಾ ಮತ್ತು ಪಿ. ಜಿ- ಸರ್ಟಿಫಿಕೇಟ್ ಕೋರ್ಸ್ ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಧಿಕೃತ ವೆಬ್‌ಸೈಟ್ www.ksoumysuru.ac.in KSOU Admission Portal ಮೂಲಕ ಪ್ರವೇಶಾತಿಯ ಅರ್ಜಿಯನ್ನು ಭರ್ತಿ ಮಾಡಿಸಿಕೊಂಡ ನಂತರ ಆನ್ಲೈನ್ ಮುಖಾಂತರ ಪ್ರವೇಶಾತಿಯ ಶುಲ್ಕ ಪಾವತಿಸಿ ಪ್ರವೇಶ ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ್.ಬಿ.ಎನ್ ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಗದಗ ಪ್ರಾದೇಶಿಕ ಕೇಂದ್ರ, ಎಲ್.ಎಲ್. ಕಟ್ಟಡ, ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ಹತ್ತಿರ, ಜನರಲ್ ಕೆ.ಎಂ.ಕಾರ್ಯಪ್ಪ ವೃತ್ತ (ಹಳೆಯ ಡಿ.ಸಿ ಕಚೇರಿ ವೃತ್ತ), ಗದಗ-582101 ಹಾಗೂ ಕಚೇರಿ ದೂರವಾಣಿ ಸಂಖ್ಯೆ: 8884231002/8970555801/ 8549856177/ 9008459778/7259962717/7338103445 ಎಂದು ತಿಳಿಸಿದ್ದಾರೆ.

## ಜ.17ರಂದು ನೌಕರರ ಸಂಘದ ವಾರ್ಷಿಕ ಮಹಾಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಾ ಘಟಕದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ 2024-25ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ದಿ. 17/01/2026 ರ ಮಧ್ಯಾಹ್ನ ಒಂದು ಗಂಟೆಗೆ ತಾಲೂಕ ಪಂಚಾಯತ ಸಾಮರ್ಥ್ಯ ಸೌಧ ಶಿರಹಟ್ಟಿಯಲ್ಲಿ ಆಯೋಜಿಸಲಾಗಿದ್ದು, ಎಲ್ಲಾ ಪದಾಧಿಕಾರಿಗಳು, ನಿರ್ದೇಶಕರು ಹಾಗೂ ಸರ್ವ ಸದಸ್ಯರು ಸಕಾಲಕ್ಕೆ ಹಾಜರಾಗಿ ಸಭೆಯನ್ನು ಯಶಸ್ವಿಗೊಳಿಸಲು ತಾಲೂಕಾ ಅಧ್ಯಕ್ಷರಾದ ಶಿವಪ್ಪ ಬಿ ಹದ್ಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಲಕ್ಕುಂಡಿಯಲ್ಲಿ ನಿಧಿ ಸಿಕ್ಕ ಪ್ರಕರಣ । ಬಾಲಕ ಪ್ರಜ್ವಲ್ ರಿತ್ತಿ ಅವರ ಪ್ರಾಮಾಣಿಕತೆ ನಿಜಕ್ಕೂ ಅನುಕರಣೀಯ; ಸಚಿವ ಎಚ್.ಕೆ. ಪಾಟೀಲ

# ಬಾಲಕನ ಪ್ರಾಮಾಣಿಕತೆ ನಿಧಿಗಿಂತ ದೊಡ್ಡದು

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿಯಲ್ಲಿ ಪತ್ತೆಯಾಗಿರುವ ನಿಧಿಯಲ್ಲಿ 466 ಗ್ರಾಂ ಚಿನ್ನಾಭರಣಗಳು ಮತ್ತು 634 ಗ್ರಾಂ ತಾಮ್ರದ ತಂಬಿಗೆ ಪತ್ತೆಯಾಗಿದ್ದು, ಅವುಗಳನ್ನು ಜಿಲ್ಲಾಡಳಿತ ತನ್ನ ವಶಕ್ಕೆ ಪಡೆದುಕೊಂಡಿದೆ. ಈ ಸಂಪೂರ್ಣ ಘಟನೆ ಬೆಳಕಿಗೆ ಬರಲು ಕಾರಣನಾದ 14 ವರ್ಷದ ಬಾಲಕ ಪ್ರಜ್ವಲ್ ರಿತ್ತಿ ಅವರ ಪ್ರಾಮಾಣಿಕತೆ ನಿಜಕ್ಕೂ ಅನುಕರಣೀಯ ಎಂದು ಸಚಿವ ಎಚ್.ಕೆ. ಪಾಟೀಲ ಪ್ರಶಂಸೆ ವ್ಯಕ್ತಪಡಿಸಿದರು.

ಜನವರಿ 10ರಂದು ಲಕ್ಕುಂಡಿ ಗ್ರಾಮದಲ್ಲಿ ಪತ್ತೆಯಾದ ನಿಧಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರು ಲಕ್ಕುಂಡಿಯ ಲಕ್ಷ್ಮೀನಾರಾಯಣ ದೇವಸ್ಥಾನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದರು.




ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ನಿಧಿ ಸಿಕ್ಕ ಮಾಹಿತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗಮನಕ್ಕೆ ಬಂದಿದೆ. ನಿಧಿ ಎಷ್ಟೇ ದೊಡ್ಡದಾಗಿರಲಿ, ಸಿಕ್ಕ ನಿಧಿಯನ್ನು ಸರ್ಕಾರಕ್ಕೆ ಪ್ರಾಮಾಣಿಕವಾಗಿ ಒಪ್ಪಿಸಿರುವ ಈ ಬಾಲಕನ ನಡೆ ನಿಧಿಗಿಂತಲೂ ದೊಡ್ಡದು ಎಂದು ಮುಖ್ಯಮಂತ್ರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ರಾಷ್ಟ್ರಕೂಟರು ಮತ್ತು ಚಾಲುಕ್ಯರು ಆಳ್ವಿಕೆ ನಡೆಸಿದ ಐತಿಹಾಸಿಕ ಹಿನ್ನೆಲೆ ಹೊಂದಿರುವ ಲಕ್ಕುಂಡಿ ಒಂದು ವಿಶಿಷ್ಟ ಸ್ಥಳವಾಗಿದೆ. ಇಂತಹ ಪುರಾತನ ಮತ್ತು ಮಹತ್ವದ ಪ್ರದೇಶಗಳಲ್ಲಿ ಕೆಲವೊಮ್ಮೆ ಅಚ್ಚರಿಯ ಘಟನೆಗಳು ಸಂಭವಿಸುವುದು ಸಹಜ. ಲಕ್ಕುಂಡಿಯನ್ನು ವಿಶ್ವ ಪಾರಂಪರಿಕ ತಾಣವನ್ನಾಗಿ ಘೋಷಿಸಲು ರಾಜ್ಯ ಸರ್ಕಾರ ನಿರಂತರ ಪ್ರಯತ್ನ ನಡೆಸುತ್ತಿದೆ ಎಂದರು.

ಪ್ರಜ್ವಲ್ ರಿತ್ತಿ ಅವರು ಪತ್ತೆಯಾದ ತಾಮ್ರದ ತಂಬಿಗೆಯನ್ನು ದೇವರ ಕೋಣೆಯಲ್ಲಿ ಸುರಕ್ಷಿತವಾಗಿ ಇಟ್ಟು ಕೀಲಿ ಹಾಕಿ ಭದ್ರಪಡಿಸಿದ್ದರು. ನಂತರ ಸ್ಥಳೀಯ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಗ್ರಾಮಸ್ಥರೊಂದಿಗೆ ಚರ್ಚಿಸಿ, ಪತ್ತೆಯಾದ ವಸ್ತುಗಳನ್ನು ಜಿಲ್ಲಾಡಳಿತಕ್ಕೆ ಒಪ್ಪಿಸಿರುವುದು ಅಪೂರ್ವ ಉದಾಹರಣೆ ಎಂದು ಹೇಳಿದರು. ಕಾನೂನಿನ ಪ್ರಕಾರ ಪತ್ತೆಯಾದ ನಿಧಿಯನ್ನು ಯಾವ ಸ್ಥಳದಲ್ಲಿ ಇಡಬೇಕು ಎಂಬ ಬಗ್ಗೆ ಜಿಲ್ಲಾಡಳಿತ ಸೂಕ್ತ ತೀರ್ಮಾನ ಕೈಗೊಳ್ಳಲಿದೆ. ಬಡ ಕುಟುಂಬ ಹಿನ್ನೆಲೆಯಲ್ಲಿರುವ ರಿತ್ತಿ ಕುಟುಂಬಕ್ಕೆ ಸರ್ಕಾರ ಎಲ್ಲಾ ರೀತಿಯ ನೆರವು ನೀಡಲಿದೆ. ಈ ಕುಟುಂಬಕ್ಕೆ ನೀಡುವ ಯಾವುದೇ ಗೌರವವು ಇಡೀ ಲಕ್ಕುಂಡಿ ಗ್ರಾಮಕ್ಕೆ ನೀಡಿದ ಗೌರವವಾಗುತ್ತದೆ ಎಂದು ಸಚಿವರು ಹೇಳಿದರು.

> ಈ ಕುರಿತು ಬುಧವಾರ ಕ್ಯಾಬಿನೆಟ್ ಸಭೆಯಲ್ಲಿ ಚರ್ಚಿಸಿ, ಕುಟುಂಬಕ್ಕೆ ಯಾವ ರೀತಿಯ ಗೌರವ ಮತ್ತು ನೆರವು ನೀಡಬೇಕು ಎಂಬ ನಿರ್ಧಾರವನ್ನು ಸಂಜೆಯೊಳಗೆ ಪ್ರಕಟಿಸಲಾಗುವುದು. ಜಗತ್ತಿನಾದ್ಯಂತ ಇಂತಹ ಘಟನೆಗಳನ್ನು ನೋಡಿದಾಗ, ಸಿಕ್ಕ ಅಮೂಲ್ಯ ವಸ್ತುಗಳನ್ನು ಪ್ರಾಮಾಣಿಕವಾಗಿ ಹಿಂತಿರುಗಿಸಿರುವ ಉದಾಹರಣೆಗಳು ವಿರಳ. ಲಕ್ಕುಂಡಿಯ ಪ್ರಾಚ್ಯವಸ್ತು ಸಂಗ್ರಹ ಕಾರ್ಯಕ್ರಮದಡಿ, ಗ್ರಾಮಸ್ಥರು ಈಗಾಗಲೇ 1100ಕ್ಕೂ ಹೆಚ್ಚು ಪ್ರಾಚ್ಯವಸ್ತುಗಳನ್ನು ಸರ್ಕಾರಕ್ಕೆ ಒಪ್ಪಿಸಿರುವುದು ಈ ಗ್ರಾಮದ ಸಂಸ್ಕೃತಿ ಮತ್ತು ಹಿರಿಮೆಯನ್ನು ತೋರಿಸುತ್ತದೆ.
>
> **- ಎಚ್.ಕೆ. ಪಾಟೀಲ.**
> ಗದಗ ಜಿಲ್ಲಾ ಉಸ್ತುವಾರಿ ಸಚಿವರು.

▶▶3ನೇ ಪುಟಕ್ಕೆ

### ಸಪಾಯಿ ಕರ್ಮಚಾರಿಗಳ ಹಕ್ಕು-ಸೌಲಭ್ಯಗಳಿಗೆ ಸಂಪೂರ್ಣ ಭದ್ರತೆ; ಡಿಸಿ ಸಿ.ಎನ್. ಶ್ರೀಧರ

# ಅಧಿಕಾರಿಗಳು ಹೊಣೆಗಾರಿಕೆಯಿಂದ ಕಾರ್ಯ ನಿರ್ವಹಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸಪಾಯಿ ಕರ್ಮಚಾರಿಗಳು ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ನಿಯೋಜನೆ ನಿಷೇಧ ಮತ್ತು ಪುನರ್ವಸತಿ ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರ ಅಧ್ಯಕ್ಷತೆಯಲ್ಲಿ ಮಹತ್ವದ ಸಭೆ ಜರುಗಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಸಪಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಲಭ್ಯವಿರುವ ಎಲ್ಲ ಸೌಲಭ್ಯಗಳು ಯಾವುದೇ ವಿಳಂಬವಿಲ್ಲದೆ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ಸಂಪೂರ್ಣ ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಪಾಯಿ ಕರ್ಮಚಾರಿಗಳಿಗೆ ನಿಯಮಾನುಸಾರ ದೊರಕಬೇಕಾದ ಇಎಸ್‌ಐ, ಪಿಎಫ್ ಸೇರಿದಂತೆ ಎಲ್ಲಾ ಭತ್ಯೆಗಳನ್ನು ಸಕಾಲಕ್ಕೆ ಪಾವತಿಸಬೇಕು, ಅವರ ಆರೋಗ್ಯ ರಕ್ಷಣೆಗೆ ವಿಶೇಷ ಒತ್ತು ನೀಡಬೇಕು ಎಂದರು.

ನಿಯಮಿತವಾಗಿ ಆರೋಗ್ಯ ತಪಾಸಣೆ ನಡೆಸಿ, ಗುಣಮಟ್ಟದ ಸಂರಕ್ಷಣಾ ಸಾಧನಗಳನ್ನು ವಿತರಿಸಿ, ಆರೋಗ್ಯ ಹಾಗೂ ಸುರಕ್ಷತೆ ಕುರಿತು ಜಾಗೃತಿ ಮೂಡಿಸಬೇಕು ಎಂದು ಸಂಬಂಧಿಸಿದ ಇಲಾಖೆಗಳಿಗೆ ಸೂಚನೆ ನೀಡಿದರು.

> ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಮಾತನಾಡಿ, ಜಿಲ್ಲೆಯಲ್ಲಿ ಈಗಾಗಲೇ ಸಪಾಯಿ ಕರ್ಮಚಾರಿಗಳಿಗೆ ನೀಡಿರುವ ಸೌಲಭ್ಯಗಳು ಹಾಗೂ ಮುಂದಿನ ದಿನಗಳಲ್ಲಿ ನೀಡಬೇಕಾದ ಸವಲತ್ತುಗಳ ಕುರಿತು ವಿವರವಾದ ಪ್ರಗತಿ ವರದಿಯನ್ನು ಸಭೆಯಲ್ಲಿ ಮಂಡಿಸಿದರು.

ಜಿಲ್ಲೆಯ ಪ್ರತಿಯೊಂದು ತಾಲೂಕು ಮಟ್ಟದಲ್ಲಿ ಸಪಾಯಿ ಕರ್ಮಚಾರಿಗಳ ಸ್ಥಿತಿಗತಿ ಕುರಿತು ತಾಲೂಕುವಾರು ಪ್ರಗತಿ ಪರಿಶೀಲನೆ ನಡೆಸಲಾಗುವುದು. ಯಾವುದೇ ಕಾರಣಕ್ಕೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್‌ಗೆ ಅವಕಾಶ ಕೊಡಬಾರದು ಎಂದು ಸ್ಪಷ್ಟಪಡಿಸಿದರು. ಸಭೆಯಲ್ಲಿ ಸಪಾಯಿ ಕರ್ಮಚಾರಿ ಸಮಿತಿಯ ಸದಸ್ಯರಾದ ರಮೇಶ್ ಕೊಳೂರ, ಯುವರಾಜ ಬಳ್ಳಾರಿ, ರಮೇಶ್ ಮ್ಯಾಗೇರಿ, ಹಿರಿಯಕ್ಕ ದೊಡ್ಡಮನಿ, ಲಕ್ಷ್ಮವ್ವ ಭಂಗಿ ಸೇರಿದಂತೆ ಇತರರು ಪಾಲ್ಗೊಂಡು, ಸಪಾಯಿ ಕರ್ಮಚಾರಿಗಳಿಗೆ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ದೊರಕುವಂತೆ ಮಾಡಬೇಕು ಹಾಗೂ ತಾವು ಎದುರಿಸುತ್ತಿರುವ ಸಮಸ್ಯೆಗಳಿಗೆ ತ್ವರಿತ ಪರಿಹಾರ ಒದಗಿಸಬೇಕೆಂದು ಸಭೆಯ ಗಮನ ಸೆಳೆದರು.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಸೋಮನಾಥ ಲಿಂಗೇಶ್ವರನಿಗೆ ಅಭಿಷೇಕ, ದೇವಸ್ಥಾನದಲ್ಲಿ ವಿಶೇಷ ಪೂಜೆ

# ಪ್ರಾಚೀನ ದೇವಸ್ಥಾನಗಳನ್ನು ರಕ್ಷಿಸಿ



■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣದಲ್ಲಿರುವ ಸೋಮನಾಥ ಲಿಂಗೇಶ್ವರ ದೇವಸ್ಥಾನವು ಅತ್ಯಂತ ಪ್ರಾಚೀನವಾಗಿದ್ದು, ಈ ದೇವಸ್ಥಾನವನ್ನು ದ್ರೋಣಾಚಾರ್ಯರು ನಿರ್ಮಿಸಿದ್ದಾರೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಹಾ ಪ್ರಧಾನ ಕಾರ್ಯದರ್ಶಿ ವ್ಹಿ.ಬಿ. ಸೋಮನಕಟ್ಟಿಮಠ ಹೇಳಿದರು.

ಅವರು ಮಂಗಳವಾರ ಸಂಗನಗೌಡ (ಮಿಥುನ್) ಪಾಟೀಲರ ಅಭಿಮಾನಿ ಬಳಗದವರು ಸೋಮನಾಥ ಲಿಂಗೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಅಭಿಷೇಕ ಹಾಗೂ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ರೋಣ ಪಟ್ಟಣಕ್ಕೆ ಪ್ರಾಚೀನ ಕಾಲದಲ್ಲಿ ದ್ರೋಣಾಪೂರ ಎಂಬ ಹೆಸರಿತ್ತು. ಅಲ್ಲದೆ ಇಲ್ಲಿ ದ್ರೋಣಾಚಾರ್ಯರು ನೆಲೆಸುವ ಮೂಲಕ ಪಟ್ಟಣದಲ್ಲಿ ಅನೇಕ ದೇವಸ್ಥಾನಗಳನ್ನು ನಿಮಿಸಿದ್ದಾರೆ ಎಂಬ ಕುರುಹುಗಳು ಇಂದಿಗೂ ಸಿಗುತ್ತವೆ. ಮುಖ್ಯವಾಗಿ ಮಹಾಭಾರತದಲ್ಲಿ ಕೌರವರು ಹಾಗೂ ಪಾಂಡವರಿಗೆ ಯುದ್ಧದ ನೈಪುಣ್ಯತೆಯನ್ನು ಹೇಳಿಕೊಟ್ಟ ನೆಲ ನಮ್ಮ ದ್ರೋಣಾಪೂರ ಎಂಬುದು ದೇವಸ್ಥಾನಗಳ ಕಲ್ಲಿನ ಬರೆಯಲಾಗಿರುವ ಬರಹಗಳಲ್ಲಿ ತಿಳಿದುಬರುತ್ತದೆ ಎಂದರು.

> ಸಂಗನಗೌಡ ಪಾಟೀಲರ ಅಭಿಮಾನಿ ಬಳಗದವರು ಪ್ರಾಚೀನ ದೇವಸ್ಥಾನದ ಆವರಣದ ಸ್ವಚ್ಛತಾ ಕಾರ್ಯ ಸೇರಿದಂತೆ ದೇವಸ್ಥಾನವನ್ನು ಸಿಂಗರಿಸಿದ್ದಾರೆ. ಅಲ್ಲದೆ ಅನ್ನಸಂತರ್ಪಣೆಯಂತಹ ಮಹತ್ವದ ಕಾರ್ಯವನ್ನು ಮಾಡಿದ್ದು ಸ್ವಾಗತರ್ಹ. ಪಟ್ಟಣದಲ್ಲಿರುವ ಎಲ್ಲ ಪ್ರಾಚೀನ ದೇವಾಲಯಗಳ ಬಗ್ಗೆ ನಾವೆಲ್ಲ ತಿಳಿದುಕೊಳ್ಳುವ ಅವಶ್ಯಕೆಯಿದೆ. ಒಳ್ಳೆಯ ಕೆಲಸಗಳಿಗೆ ಶಾಸಕ ಜಿ.ಎಸ್. ಪಾಟೀಲ ಕುಟುಂಬ ಸದಾ ಇರಲಿದೆ ಎಂದು ವ್ಹಿ.ಬಿ. ಸೋಮನಕಟ್ಟಿಮಠ ಹೇಳಿದರು.

ನಮ್ಮ ನಾಡು ಹಾಗೂ ದೇಶದಲ್ಲಿ ಜಕಣಾಚಾರ್ಯರು ಕಟ್ಟಿದ ದೇವಸ್ಥಾನಗಳು ನಮಗೆ ಕಾಣಸಿಗುತ್ತವೆ. ವಿಪರ್ಯಾಸ ಅಂದರೆ ದ್ರೋಣಾಚಾರ್ಯರು ಕಟ್ಟಿರುವ ದೇವಸ್ಥಾನಗಳನ್ನು ರೋಣ ಪಟ್ಟಣದಲ್ಲಿ ಮಾತ್ರ ಕಾಣಲು ಸಾಧ್ಯ ಎಂದು ಪ್ರತಿಪಾದಿಸಿದ ಅವರು, ಪಟ್ಟಣದ ಜನತೆ ಇತಿಹಾಸವನ್ನು ತಿಳಿದುಕೊಳ್ಳುವ ಮೂಲಕ ಪ್ರಾಚೀನ ದೇವಸ್ಥಾನಗಳನ್ನು ರಕ್ಷಿಸುವ ಕೆಲಸದಲ್ಲಿ ತೊಡಗಬೇಕು. ಅಂದಾಗ ನಮ್ಮ ಊರಿನ ಇತಿಹಾಸವನ್ನು ಮುಂದಿನ ಪೀಳಿಗೆಗೆ ತಿಳಿಸಿಕೊಡಲು ಸಹಾಯವಾಗಲಿದೆ ಎಂದರು.

ಈ ಸಂಧರ್ಭದಲ್ಲಿ ಸಂಗನಗೌಡ ಪಾಟೀಲ ದಂಪತಿಗಳನ್ನು ಸತ್ಕರಿಸಲಾಯಿತು. ಅಸ್ಲಂ ಕೊಪ್ಪಳ, ಯಲ್ಲಪ್ಪ ಕಿರೇಸೂರ, ಬಸವರಾಜ ಹಲಗಿ, ಶಾಬಾಜ್ ಗದಗ, ಬಶೀರ ಕಟ್ಟಿಮನಿ, ತೌಹಿದ್ ಜಲವಾರ, ಸಮೀರ್ ದೊಡ್ಡಮನಿ, ಕೈಫ್ ಮಕಾಂದಾರ, ಮೋದಿನ ಹುಲ್ಯಾಳ, ಭರತ್ ಮಾನೆ, ಮಹದೇವಪ್ಪ ತೆಗ್ಗಿನಮನಿ, ಮಲ್ಲು ರಾಯನಗೌಡ್ರ, ಶಶಿಕುಮಾರ ಹಾದಿಮನಿ ಸೇರಿದಂತೆ ಅಭಿಮಾನಿ ಬಳಗದವರು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ವಕ್ತಾರ ವ್ಹಿ.ಆರ್. ಗೋವಿಂದಗೌಡ್ರ ಆರೋಪ

# 800 ಗ್ರಾಂ ಇದ್ದ ಚಿನ್ನ 466 ಗ್ರಾಂ ಹೇಗಾಯ್ತು?!




■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿ ಗ್ರಾಮದಲ್ಲಿ 800 ಗ್ರಾಂ ಚಿನ್ನ ಪತ್ತೆಯಾಗಿದೆ ಎಂದು ಸಿದ್ದು ಪಾಟೀಲ ಎನ್ನುವ ವ್ಯಕ್ತಿ ದೂರವಾಣಿ ಮೂಲಕ ಸಿಎಂಗೆ ಮಾಹಿತಿ ನೀಡಿದ್ದಾರೆ. ಈಗ ಆ ಚಿನ್ನ 466 ಗ್ರಾಂ ಇದೆ ಎಂದು ಹೇಳಲಾಗುತ್ತಿದೆ. ಹಾಗಾದರೆ ಇನ್ನುಳಿದ ಚಿನ್ನ ಎಲ್ಲಿ ಹೋಯಿತು? ಮುಖ್ಯಮಂತ್ರಿಗೆ ಸುಳ್ಳು ಹೇಳಿದರಾ ಎಂದು ರಾಜ್ಯ ಜೆಡಿಎಸ್ ವಕ್ತಾರ ವ್ಹಿ.ಆರ್. ಗೋವಿಂದಗೌಡ್ರ ಪ್ರಶ್ನಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಚಿನ್ನ ಪತ್ತೆಯಾದ ಬಗ್ಗೆ ಸಿಎಂ ಹಾಗೂ ಸಚಿವರಿಗೆ ತಿಳಿಸುವುದಕ್ಕೂ ಮೊದಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ತಿಳಿಸಬಹುದಿತ್ತು. ಅಧಿಕಾರಿಗಳು ಚಿನ್ನ ಪರಿಶೀಲನೆ ಮಾಡುವ ವೇಳೆ ಸಿದ್ದು ಪಾಟೀಲ ಯಾಕೆ ಹಾಜರಿದ್ದರು? ಪುರಾತತ್ವ ಇಲಾಖೆ ಅಧಿಕಾರಿ ರಮೇಶ್ ಮೂಲಿಮನಿ ಮೇಲೆ ಒತ್ತಡ ತಂದು ನಿಧಿ ಎಂದು ಹೇಳಿಸಿದ್ದಾರೆ.

ನಿಧಿ ಎಂದು ಸಾಬೀತಾದರೆ ಬಯಲು ವಸ್ತು ಸಂಗ್ರಹಾಲಯಕ್ಕೆ ಸರ್ಕಾರದಿಂದ ಹಣ ಬರುತ್ತದೆ ಎನ್ನುವ ಕಾರಣಕ್ಕೆ ನಿಧಿ ಎಂದು ಹೇಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

> ನಿಧಿ ಸಿಕ್ಕಾಗ ತನಿಖೆ ನಡೆಸಲು ಸಂಬಂಧಪಟ್ಟ ಇಲಾಖೆಗಳಿವೆ. ಆದರೆ, ಲಕ್ಕುಂಡಿಯಲ್ಲಿ ಸಿಕ್ಕ ನಿಧಿ ಕುರಿತು ಆಟವಾಡುವ ಹುಡುಗರ ರೀತಿ ವರ್ತಿಸಲಾಗುತ್ತಿದೆ. ಮನೆ ಮಾಲಕರನ್ನು ಹೆದರಿಸಿ ವ್ಯವಸ್ಥಿತ ಪಿತೂರಿ ನಡೆಸಲಾಗುತ್ತಿದೆ. ಘಟನೆಯಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ ಮಧ್ಯಸ್ಥಿಕೆಯ ಕುರಿತು ಸೂಕ್ತ ತನಿಖೆ ಆಗಬೇಕು.
>
> **- ವೀರನಗೌಡ ನಾಡಗೌಡ್ರ.**
> ಜಿ.ಪಂ ಮಾಜಿ ಅಧ್ಯಕ್ಷ

▶▶3ನೇ ಪುಟಕ್ಕೆ



ರಾಷ್ಟ್ರೀಯ ಯುವ ದಿನದ ಅಂಗವಾಗಿ ನಗರದ ಹೆಚ್.ಸಿ.ಇ.ಎಸ್ ಕಾನೂನು ಮಹಾವಿದ್ಯಾಲಯದಲ್ಲಿ ಯೂಥ್ ರೆಡ್‌ಕ್ರಾಸ್ ಘಟಕದ ವತಿಯಿಂದ ಸ್ವಾಮಿ ವಿವೇಕಾನಂದರ ಜಯಂತಿ, ಸಹಕಾರ ರತ್ನ ದಿವಂಗತ ಎಂ.ವಿ. ಮೂಲಿಮನಿಯವರ ಜನ್ಮದಿನವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷರು, ಪ್ರಾಂಶುಪಾಲರು, ಅಧ್ಯಾಪಕರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು, ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಯುವಜನರಲ್ಲಿ ಶಿಸ್ತು, ಆತ್ಮವಿಶ್ವಾಸ, ಚರಿತ್ರೆ ನಿರ್ಮಾಣ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯ ಪಾತ್ರ ವಹಿಸುವಂತೆ ಅವರ ಬೋಧನೆಗಳ ಮಹತ್ವವನ್ನು ತಿಳಿಸಲಾಯಿತು.




ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಡಂಬಳ ಗ್ರಾಮದ ಡಿಪಿಇಪಿ ಸರಕಾರಿ ಶಾಲೆಯ ವಿದ್ಯಾರ್ಥಿನಿ ಕಾವ್ಯಾ ಹುಲಗಪ್ಪ ಜೋಂಡಿ ಅವರು ದೇಶಭಕ್ತಿ ಗೀತೆ ವಿಭಾಗದಲ್ಲಿ ಅತ್ಯುತ್ತಮವಾಗಿ ಹಾಡಿ ಪ್ರಥಮ ಸ್ಥಾನಗಳಿಸಿ ಸಾಧನೆ ಮಾಡಿದ್ದಾಳೆ. ವಿದ್ಯಾರ್ಥಿನಿಗೆ ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರು ಹಾಗೂ ಗ್ರಾಮಸ್ಥರು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

**ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳವರ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಮಹಾತ್ಮರ ಚಿಂತನೆಗಳು ಮಾನವನ ಬದುಕಿಗೆ ಆಶಾಕಿರಣ

■ ವಿಜಯಸಾಕ್ಷಿ ಸುದ್ದಿ, ಬಂಕಾಪುರ

ಮಾನವ ಜೀವನದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ಆದರ್ಶ ಚಿಂತನೆಗಳು ಮುಖ್ಯ. ಮಹಾತ್ಮರ ಮತ್ತು ತಪಸ್ವಿಗಳ ಚಿಂತನೆಗಳು ಬದುಕಿ ಬಾಳುವ ಜನಾಂಗಕ್ಕೆ ಆಶಾಕಿರಣ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಅರಳೆಲೆ ಕಟ್ಟಿಮನಿ ಹಿರೇಮಠದ ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳವರ ಲಿಂಗ ಬೆಳಕಿನ 52ನೇ ವರ್ಷದ ಪುಣ್ಯ ಸ್ಮರಣೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ಸಾರ್ಥಕಗೊಳ್ಳದು. ಮನುಷ್ಯನಿಗೆ ಸಂಪತ್ತು ಮತ್ತು ಆ ಸಂಪತ್ತಿನಿಂದ ಇಷ್ಟಾರ್ಥಗಳನ್ನು ಬಯಸುತ್ತಾನೆ. ಇವೆರಡನ್ನು ಬಯಸುವ ಮನುಷ್ಯ ಧರ್ಮವೇ ಮೂಲವೆಂಬುದನ್ನು ಮರೆಯುತ್ತಾನೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ವಿಶ್ವ ಬಂಧುತ್ವ ಸಾರಿದ ವೀರಶೈವ ಧರ್ಮದ ಆದರ್ಶ ಮೌಲ್ಯಗಳನ್ನು ಬಾಳ ಬದುಕಿನಲ್ಲಿ ಅಳವಡಿಸಿಕೊಂಡು ಬಾಳಿದವರು ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು. ಅವರ ಸಾತ್ವಿಕ ಮಾರ್ಗದರ್ಶನದಲ್ಲಿ ಬಹಳಷ್ಟು ಜನ ಭಕ್ತರು ಜೀವನದಲ್ಲಿ ಸುಖ-ಶಾಂತಿ ಪಡೆದಿದ್ದನ್ನು ಕಾಣುತ್ತೇವೆ. ಪರಮ ಪೂಜ್ಯ ಲಿಂ. ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು, ಹುಲ್ಯಾಳ ಶಂಭುಲಿಂಗ ಶಿವಾಚಾರ್ಯರು, ಹುಬ್ಬಳ್ಳಿ ಹನ್ನೆರಡು ಮಠದ ಮಡಿವಾಳ ಶಿವಾಚಾರ್ಯರನ್ನು ನಾಡಿಗೆ ಕೊಟ್ಟ ಕೀರ್ತಿ ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳಿಗೆ ಸಲ್ಲುತ್ತದೆ. ಇಂದಿನ ಪಟ್ಟಾಧ್ಯಕ್ಷರಾದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳವರು ಅವರು ಹಾಕಿದ ದಾರಿಯಲ್ಲಿ ನಡೆದು ಭಕ್ತ ಸಂಕುಲಕ್ಕೆ ಮಾರ್ಗದರ್ಶನ ನೀಡುತ್ತಿರುವುದು ತಮಗೆ ಹರುಷ ತಂದಿದೆ ಎಂದರು.



ನೇತೃತ್ವ ವಹಿಸಿದ ಅರಳೆಲೆ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯನ ಉಜ್ವಲ ಬದುಕಿಗೆ ಧರ್ಮವೇ ದಿಕ್ಸೂಚಿ. ಧರ್ಮದ ದಾರಿ ಮೀರಿ ನಡೆದರೆ ಶಾಂತಿ-ಸುಖ ದೊರಕಲಾರದು. ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯರು ತಪಸ್ವಿಗಳಾಗಿ ಸಮಾಜ ಚಿಂತಕರಾಗಿ ವೀರಶೈವ ಧರ್ಮ ಸಂಸ್ಕೃತಿ ಬೆಳೆಸುವುದರಲ್ಲಿ ಶ್ರಮಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. 52ನೇ ವರ್ಷದ ಲಿಂಗ ಬೆಳಗಿನ ಸಮಾರಂಭದಲ್ಲಿ ನಾಡಿನೆಲ್ಲೆಡೆಯಿಂದ ಭಕ್ತರು ಆಗಮಿಸಿ ಅವರ ಕೃಪಾ ಕಾರುಣ್ಯಕ್ಕೆ ಪಾತ್ರರಾಗುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಸಮಾರಂಭದಲ್ಲಿ ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಗಂಜೀಗಟ್ಟಿ ಡಾ. ಶಿವಲಿಂಗ ಶಿವಾಚಾರ್ಯರು, ಕರ್ಜಗಿ ಶಿವಯೋಗಿ ಶಿವಾಚಾರ್ಯರು, ಹಿರೇಮಣಕಟ್ಟಿ ವಿಶ್ವಾರಾಧ್ಯ ಶಿವಾಚಾರ್ಯರು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಶಾಂತಪುರ ಮಠದ ಶಿವಾನಂದ ಶಿವಾಚಾರ್ಯರು, ಸೂಡಿ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು, ನೆಗಳೂರು ಗುರುಶಾಂತೇಶ್ವರ ಶಿವಾಚಾರ್ಯರು, ಹಾವೇರಿ ಅಭಿನವರುದ್ರ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಕೂಡಲ ಗುರುಮಹೇಶ್ವರ ಶಿವಾಚಾರ್ಯರು ಸೇರಿದಂತೆ ವಿವಿಧ ಮಠಗಳ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಶಾಸಕ ಯಾಸೀರಖಾನ ಪಠಾಣ, ಮಾಜಿ ಸಂಸದ ಮಂಜುನಾಥ ಕುನ್ನೂರ, ಗಂಗಿಭಾವಿ ಶಶಿಧರ ಯಲಿಗಾರ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಡಾ. ಆರ್.ಎಸ್. ಅರಳೆಲೆಹಿರೇಮಠ ಸ್ವಾಗತಿಸಿ ಪ್ರಾಸ್ತಾವಿಕ ನುಡಿ ಸಲ್ಲಿಸಿದರು. ಸವಣೂರಿನ ಡಾ. ಗುರುಪಾದಯ್ಯ ವೀ.ಸಾಲಿಮಠ ಹಾಗೂ ಬಂಕಾಪುರದ ಎಂ.ಬಿ. ಉಂಕಿ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಬಂಕಾಪುರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯರ ಭವ್ಯ ಭಾವಚಿತ್ರ-ಬೆಳ್ಳಿ ಮಂಗಲ ಮೂರ್ತಿಯ ಭವ್ಯ ಮೆರವಣಿಗೆ ಜರುಗಿತು.

ಸಮಾರಂಭ ಉದ್ಘಾಟಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜ್ಞಾನ ಕ್ರಿಯಾ ಸಂವೇದನಾಶೀಲ ವೀರಶೈವ ಧರ್ಮ ಸಕಲರಿಗೂ ಒಳಿತನ್ನೇ ಬಯಸಿದೆ. ಗಂಡು-ಹೆಣ್ಣು, ಉಚ್ಚ-ನೀಚ, ಬಡವ-ಶ್ರೀಮಂತ ಎಂಬ ತಾರತಮ್ಯವಿಲ್ಲದೇ ಸಕಲರ ಶ್ರೇಯಸ್ಸನ್ನು ಬಯಸಿದೆ. ಲಿಂ. ಶ್ರೀ ರುದ್ರಮುನಿ ಶಿವಾಚಾರ್ಯರು ಶ್ರೇಷ್ಠ ಆಧ್ಯಾತ್ಮ ಚಿಂತಕರಾಗಿ ವೀರಶೈವ ಧರ್ಮ ಸಂಸ್ಕೃತಿ ಮತ್ತು ಗುರು ಪರಂಪರೆ ಮಹತ್ವವನ್ನು ಭಕ್ತರಿಗೆ ಬೋಧಿಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ ಎಂದರು.

# ವಿಬಿ-ಜಿ ರಾಮ್ ಜಿ ಕಾಯ್ದೆ ರದ್ದಾಗುವವರೆಗೆ ಹೋರಾಟ : ಸಿಎಂ ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನರೇಗಾ ಕಾಯ್ದೆ ಪುನ:ಸ್ಥಾಪನೆ ಆಗಿ ವಿಬಿ-ಜಿ ರಾಮ್ ಜಿ ಕಾಯ್ದೆ ರದ್ದಾಗುವವರೆಗೆ ನಮ್ಮ ಹೋರಾಟವನ್ನು ಮುಂದುವರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಕೆಪಿಸಿಸಿ ವತಿಯಿಂದ ಮಂಗಳವಾರ (ಜ.13) ಬೆಂಗಳೂರಿನ ಅರಮನೆ ಮೈದಾನದ ಗಾಯತ್ರಿ ವಿಹಾರದಲ್ಲಿ ಆಯೋಜಿಸಲಾಗಿದ್ದ ನರೇಗಾ ಉಳಿಸಿ ಆಂದೋಲನದ ಪೂರ್ವ ಸಿದ್ಧತೆ ಸಭೆಯಲ್ಲಿ ಅವರು ಮಾತನಾಡಿದರು.



ಇದು ಗ್ರಾಮ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಆಗುವ ಆಂದೋಲನ. ಉತ್ತರ ಭಾರತದಲ್ಲಿ ಕಾಯ್ದೆಗಳ ಬದಲಾವಣೆಗೆ ರೈತರು ಹೋರಾಡಿದಂತೆ ಹೋರಾಟ ಮಾಡಬೇಕು ಎಂದು ಸಿಎಂ ಹೇಳಿದರು.

ಕಳೆದ ತಿಂಗಳು ಎಐಸಿಸಿ ಕಾರ್ಯಕಾರಿ ಸಮಿತಿ ಸಭೆ ನಡೆದಿದೆ. ನರೇಗಾ ರದ್ದು ಮಾಡಿರುವುದನ್ನು ಪಕ್ಷ ಬಹಳ ಗಂಭೀರವಾಗಿ ಪರಿಗಣಿಸಿದೆ. ಕೇಂದ್ರ ಸರ್ಕಾರ ನರೇಗಾ ರದ್ದು ಮಾಡಿ ವಿಬಿ-ಜಿ ರಾಮ್ ಜಿ ಎಂಬ ಹೊಸ ಕಾಯ್ದೆಯನ್ನು ರೂಪಿಸಿದೆ. ಮಹಾತ್ಮ ಗಾಂಧಿ ಹೆಸರು ಎಂದರೆ ಅವರಿಗೆ ಅಲರ್ಜಿ ಎಂದರು.

ನರೇಗಾದಿಂದ 12.16 ಕೋಟಿ ಕಾರ್ಮಿಕರಿಗೆ ಕೆಲಸ ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ ನರೇಗಾ ಕಾಯ್ದೆಯನ್ನು ಗ್ರಾಮೀಣ ಪ್ರದೇಶದ ಬಡವರಿಗೆ ಕೆಲಸದ ಹಕ್ಕು ನೀಡಲೆಂದು ಮೂಲಭೂತ ಹಕ್ಕನ್ನಾಗಿಸಿದರು. ನಿರುದ್ಯೋಗ, ಆಹಾರ, ಮಾಹಿತಿ, ಕಾಡಿನಲ್ಲಿ ವಾಸಿಸುವ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯುವ ಪ್ರಯತ್ನ ಮಾಡಿದರು. ಆಹಾರ ಭದ್ರತಾ ಕಾಯ್ದೆ, ಉದ್ಯೋಗ ಖಾತ್ರಿ, ಮಾಹಿತಿ ಹಕ್ಕು, ಶಿಕ್ಷಣದ ಹಕ್ಕು, ಅರಣ್ಯ ವಾಸಿಗಳ ಹಕ್ಕು ಒದಗಿಸುವ ಕಾಯ್ದೆಗಳನ್ನು ರೂಪಿಸಿದರು. ಕಳೆದ 20 ವರ್ಷಗಳಿಂದ ಜಾರಿಯಲ್ಲಿದ್ದ ಕಾಯ್ದೆಯಡಿ 12.16 ಕೋಟಿ ಕಾರ್ಮಿಕರು ದೇಶದಲ್ಲಿ ಕೆಲಸ ಮಾಡುತ್ತಿದ್ದು, 6.21ಕೋಟಿ ಮಹಿಳೆಯರು ಕೆಲಸಮಾಡುತ್ತಿದ್ದಾರೆ ಎಂದು ತಿಳಿಸಿದರು.


ವಿಬಿ-ಜಿ ರಾಮ್ ಜಿ ಮೂಲಕ ಮತ್ತೊಮ್ಮೆ ಮಹಾತ್ಮ ಗಾಂಧೀಯ ಕೊಲೆ ನರೇಗಾದಿಂದ ಗ್ರಾಮೀಣ ಪ್ರದೇಶದಲ್ಲಿ 365 ದಿನಗಳ ಕಾಲ ಕೆಲಸ ಕೇಳಬಹುದಾಗಿತ್ತು. ಕಾರ್ಮಿಕರು ಅವರ ಊರಿನಲ್ಲಿ, ಅವರ ಜಮೀನಿನಲ್ಲಿಯೇ ಕೆಲಸ ಮಾಡಬಹುದಾಗಿತ್ತು. ಇದನ್ನು ಬದಲಾಯಿಸಿ ಮೋದಿ ಸರ್ಕಾರ ವಿಬಿ-ಜಿ ರಾಮ್ ಜಿ ಕಾಯ್ದೆ ಜಾರಿಗೆ ತಂದಿದೆ. ದಶರಥ ರಾಮ, ಸೀತಾ ರಾಮ ಅಥವಾ ಕೌಶಲ್ಯ ರಾಮನಲ್ಲ. ಮಹಾತ್ಮಾ ಗಾಂಧಿ ಕೊಂದ ನಾಥೂರಾಮ ಇದು. ಗಾಂಧಿಯವರನ್ನು ಮೊತ್ತೊಮ್ಮೆ ಕೊಲ್ಲುತ್ತಿದ್ದಾರೆ. ನರೇಗಾ ಕಾಯ್ದೆಯಡಿ ಕೆಲಸ ಕೊಡಲಿಲ್ಲ ಎಂದು ನ್ಯಾಯಾಲಯಕ್ಕೆ ಕೂಡ ಹೋಗಬಹುದಿತ್ತು ಎಂದರು.

ನರೇಗಾ ಉಳಿಸಿ ಜನಾಂದೋಲನವಾಗಬೇಕು ಈಗ ಕೇಂದ್ರ ಸರ್ಕಾರ ಅಧಿಸೂಚನೆ ಮೂಲಕ ಇಂಥ ಕಡೆ ಕೆಲಸ ಎಂದು ನಿಗದಿ ಮಾಡುತ್ತದೆ, ಅಲ್ಲಿ ಕೆಲಸ ಮಾಡಬೇಕು. ರಾಜ್ಯಗಳು ಶೇಕಡ 40ರಷ್ಟು ವೆಚ್ಚವನ್ನು ಭರಿಸಬೇಕಿದೆ. 2,500 ಕೋಟಿ ರೂಪಾಯಿಯನ್ನು ರಾಜ್ಯ ಸರ್ಕಾರ ಕೊಡಬೇಕಾಗುತ್ತದೆ. ಅದಕ್ಕಾಗಿಯೇ ನರೇಗಾ ಉಳಿಸಿ ಆಂದೋಲನವನ್ನು ರೂಪಿಸಲಾಗಿದೆ. ಇದು ಜನಾಂದೋಲನವಾಗಿ ಪರಿವರ್ತನೆ ಆಗಬೇಕು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

# 'ಕೂಡಲೇ ಇರಾನ್‌ನಿಂದ ಹೊರಡಿ, ಸಹಾಯ ನಿರೀಕ್ಷಿಸಬೇಡಿ': ತನ್ನ ಪ್ರಜೆಗಳಿಗೆ ಕರೆ ನೀಡಿದ ಅಮೆರಿಕ

■ ವಿಜಯಸಾಕ್ಷಿ ಸುದ್ದಿ, ವಾಷಿಂಗ್ಟನ್

ಆಡಳಿತ ವಿರೋಧಿ ಪ್ರತಿಭಟನೆಯನ್ನು ಹತ್ತಿಕ್ಕಿ, ಪ್ರತಿಭಟನಕಾರರ ಸಾವಿಗೆ ಕಾರಣವಾಗುತ್ತಿರುವ ಇರಾನ್ ವಿರುದ್ಧ ದಾಳಿ ಮಾಡುವ ಬೆದರಿಕೆ ಹಾಕಿದ ಬೆನ್ನಲ್ಲೇ ತಮ್ಮ ದೇಶದ ನಾಗರಿಕರಿಗೆ ಇರಾನ್ ತೊರೆಯುವಂತೆ ಅಮೆರಿಕ ಸೂಚನೆ ನೀಡಿದೆ.



ದೇಶಾದ್ಯಂತ ಪ್ರತಿಭಟನೆಗಳು, ಹಿಂಸಾಚಾರ ಮತ್ತು ಇಂಟರ್ನೆಟ್ ಸಂಪರ್ಕ ಕಡಿತಗೊಂಡಿರುವುದನ್ನು ಉಲ್ಲೇಖಿಸಿ, ಇರಾನ್‌ನಲ್ಲಿರುವ ಅಮೆರಿಕನ್ ನಾಗರಿಕರಿಗೆ "ಈಗಲೇ ಹೊರಹೋಗಿ" ಎಂದು ಯುಎಸ್ ಸ್ಟೇಟ್ ಡಿಪಾರ್ಟ್‌ಮೆಂಟ್ ಮತ್ತು ವರ್ಚುವಲ್ ರಾಯಭಾರ ಕಚೇರಿ ಟೆಹ್ರಾನ್‌ನಲ್ಲಿ ಎಚ್ಚರಿಕೆ ನೀಡಿರುವುದಾಗಿ ವರದಿಯಾಗಿದೆ. ಇರಾನ್ ಸರ್ಕಾರ ವಿರೋಧಿ ಪ್ರತಿಭಟನೆಗಳು ಮೂರನೇ ವಾರಕ್ಕೆ ಕಾಲಿಟ್ಟಿರುವ ಹಿನ್ನೆಲೆಯಲ್ಲಿ ಸೋಮವಾರ ಈ ಸಲಹೆ ನೀಡಿದ್ದು, ನೂರಾರು ಜನರು ಸಾವನ್ನಪ್ಪಿದ್ದಾರೆ ಮತ್ತು ಸಾವಿರಾರು ಜನರು ಬಂಧನಕ್ಕೊಳಗಾಗಿದ್ದಾರೆ ಎಂದು ಮಾನವ ಹಕ್ಕುಗಳ ಗುಂಪುಗಳು ಮತ್ತು ಸುದ್ದಿ ವರದಿಗಳು ತಿಳಿಸಿವೆ.

ಟೆಹ್ರಾನ್‌ನಲ್ಲಿರುವ ಸ್ವಿಸ್ ರಾಯಭಾರ ಕಚೇರಿಯು ತುರ್ತು ಸೇವೆಗಳನ್ನು ಮಾತ್ರ ಒದಗಿಸುತ್ತದೆ, ನಿಯಮಿತ ಕಾನ್ಸುಲರ್ ನೆರವು ಲಭ್ಯವಿಲ್ಲ. ಬಂಧನದಲ್ಲಿರುವ ಆಖ ನಾಗರಿಕರು – ವಿಶೇಷವಾಗಿ ಉಭಯ ರಾಷ್ಟ್ರೀಯರು – ವಿರಳವಾಗಿ ಹೊರಗಿನ ಸಹಾಯವನ್ನು ಪಡೆಯುತ್ತಾರೆ. ಭದ್ರತಾ ಕ್ರಮಗಳು, ವಿದೇಶಿ ಪ್ರಯಾಣದ ಮೇಲಿನ ನಿರ್ಬಂಧಗಳು ಮತ್ತು ದೂರಸಂಪರ್ಕ ಸಂಪರ್ಕ ಕಡಿತ ಸೇರಿದಂತೆ ಇತ್ತೀಚಿನ ಘಟನೆಗಳು ಇರಾನ್‌ನಲ್ಲಿ ವಿದೇಶಿಯರಿಗೆ ಪರಿಸ್ಥಿತಿಯನ್ನು ಅತ್ಯಂತ ಅಪಾಯಕಾರಿಯನ್ನಾಗಿ ಮಾಡಿವೆ ಎಂದು ಹಲವು ಮಾಧ್ಯಮಗಳು ವರದಿ ಮಾಡಿವೆ. ಕಳೆದ ತಿಂಗಳು, ಇಲಾಖೆಯು ಅಮೆರಿಕನ್ನರು, ವಿಶೇಷವಾಗಿ ಉಭಯ ಅಮೆರಿಕ-ಇರಾನಿಯನ್ ನಾಗರಿಕರು, ದೀರ್ಘಾವಧಿಯ ಜೈಲು ಶಿಕ್ಷೆಯನ್ನು ಅನುಭವಿಸಿದ ಮತ್ತು ಕಾನೂನುಬದ್ಧ ವಿಚಾರಣೆಯನ್ನು ನಿರಾಕರಿಸಿದ ಪ್ರಕರಣಗಳನ್ನು ವರದಿ ಮಾಡಿದೆ.

ಇರಾನಿನ ಕಾನೂನು ಉಭಯ ಪೌರತ್ವವನ್ನು ಗುರುತಿಸುವುದಿಲ್ಲ, ಅಮೆರಿಕ-ಇರಾನಿಯನ್ ಉಭಯ ಪ್ರಜೆಗಳನ್ನು ಕೇವಲ ಇರಾನಿಯನ್ನರಂತೆ ಪರಿಗಣಿಸುತ್ತದೆ ಮತ್ತು ಅವರನ್ನು ಅಮೆರಿಕ ಅಥವಾ ಸ್ವಿಸ್ ಕಾನ್ಸುಲರ್ ಹಸ್ತಕ್ಷೇಪದಿಂದ ಹೊರಗಿಡುತ್ತದೆ.

# ಅಪ್ರಾಪ್ತ ಮುಸ್ಲಿಂ ವಿದ್ಯಾರ್ಥಿಗೆ ಎರಡು ತಿಂಗಳ ಜೈಲು ಶಿಕ್ಷೆ: ಇದು 'ಕಾನೂನುಬಾಹಿರ' ಎಂದ ಪಾಟ್ನಾ ಹೈಕೋರ್ಟ್: 5 ಲಕ್ಷ ಪರಿಹಾರಕ್ಕೆ ಆದೇಶ

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರ ಪೊಲೀಸರು ಎರಡು ತಿಂಗಳಿಗೂ ಹೆಚ್ಚು ಕಾಲ ಮುಸ್ಲಿಂ ಅಪ್ರಾಪ್ತ ವಿದ್ಯಾರ್ಥಿನಿಯನ್ನು ಬಂಧಿಸಿದ್ದು, ಕಾನೂನುಬಾಹಿರ ಎಂದು ಪಾಟ್ನಾ ಹೈಕೋರ್ಟ್ ಹೇಳಿದೆ. ಇಂಥ ವಿಚಾರಗಳಲ್ಲಿ ರಾಜ್ಯ ಮೂಕ ಪ್ರೇಕ್ಷಕನಾಗಿ ಉಳಿಯಲು ಸಾಧ್ಯವಿಲ್ಲ ಎಂದಿರುವ ಕೋರ್ಟ್ ಸಂತ್ರಸ್ತ ವಿದ್ಯಾರ್ಥಿ ಕುಟುಂಬಕ್ಕೆ 5ಲಕ್ಷ ಪರಿಹಾರ ನೀಡುವಂತೆ ಆದೇಶಿಸಿದೆ.




ವಿದ್ಯಾರ್ಥಿಯನ್ನು "ಅಕ್ರಮವಾಗಿ ಬಂಧಿಸಲಾಗಿದೆ" ಎಂದಿದ್ದ ಕುಟುಂಬ ಪ್ರಕರಣದಿಂದ ವಿದ್ಯಾರ್ಥಿಯನ್ನು ಬಿಡುಗಡೆ ಮಾಡುವಂತೆ ಕೋರಿ ಹೇಬಿಯಸ್ ಕಾರ್ಪಸ್ ಅರ್ಜಿಯನ್ನು ಸಲ್ಲಿಸಿತ್ತು.

ನ್ಯಾಯಮೂರ್ತಿಗಳಾದ ರಾಜೀವ್ ರಂಜನ್ ಪ್ರಸಾದ್ ಮತ್ತು ರಿತೇಶ್ ಕುಮಾರ್ ಅವರನ್ನೊಳಗೊಂಡ ಪೀಠವು, ಅವರ ಬಂಧನವು ನ್ಯಾಯಸಮ್ಮತವಲ್ಲ ಎಂದು ಒತ್ತಿಹೇಳಿತು, ಇದರಿಂದಾಗಿ ಪೊಲೀಸರು ತಮ್ಮ ಕೃತ್ಯಗಳಿಗೆ ಹೊಣೆಗಾರರಾಗುತ್ತಾರೆ ಎಂದು ಸಹ ಎಚ್ಚರಿಸಿತು.

ಪೊಲೀಸರು ಅಕ್ಟೋಬರ್ 23, 2025 ರಂದು ಬಾಲಕನನ್ನು ವಶಕ್ಕೆ ಪಡೆದ ನಂತರ ಅವನ ಕುಟುಂಬವು ಹೇಬಿಯಸ್ ಕಾರ್ಪಸ್ ಎಂಬ ಅರ್ಜಿಯನ್ನು ಸಲ್ಲಿಸಿತ್ತು ಎನ್ನಲಾಗಿದೆ. "ವಿವರಣಾ ಅಧಿಕಾರಿಯು ಯಾವುದೇ ಬಲವಾದ ಸಾಕ್ಷ್ಯಗಳಿಲ್ಲದೆ 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ವಿದ್ಯಾರ್ಥಿಯನ್ನು ಬಂಧಿಸಲು ಮುಂದಾದರು. ಈ ಪ್ರಕರಣದಲ್ಲಿ ಅವರು ಹಾಗೆ ಮಾಡಲು ಸಾಧ್ಯವಿಲ್ಲ" ಎಂದು ಪೀಠ ಹೇಳಿದೆ.

"ಇದು ಅರ್ಜಿದಾರರನ್ನು ಕಾನೂನುಬಾಹಿರವಾಗಿ ಬಂಧಿಸಲಾಗಿದೆ ಎಂಬ ತೀರ್ಮಾನಕ್ಕೆ ನಾವು ಬಂದಿದ್ದೇವೆ ಮತ್ತು ಅಂತಹ ಸಂದರ್ಭದಲ್ಲಿ, ಈ ನ್ಯಾಯಾಲಯವು ಸಾಂವಿಧಾನಿಕ ನ್ಯಾಯಾಲಯವಾಗಿರುವುದರಿಂದ ಮೂಕ ಪ್ರೇಕ್ಷಕನಾಗಿ ಉಳಿಯಲು ಸಾಧ್ಯವಿಲ್ಲ" ಎಂದು ನ್ಯಾಯಾಲಯ ಹೇಳಿದೆ.

# ಪಶ್ಚಿಮ ಬಂಗಾಳ: ಸೋಮವಾರ ಪ್ರತ್ಯೇಕ ಸ್ಥಳಗಳಲ್ಲಿ ಎರಡು ಸಾವು: ಎಸ್‌ಐಆರ್ ಆತಂಕವೇ ಸಾವಿಗೆ ಕಾರಣ ಎಂದ ಕುಟುಂಬಗಳು

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಪಶ್ಚಿಮ ಬಂಗಾಳದಲ್ಲಿ ಸೋಮವಾರ ಇಬ್ಬರು ಸಾವನ್ನಪ್ಪಿದ್ದು, ಉತ್ತರ ದಿನಾಜ್‌ಪುರದಲ್ಲಿ ಒಬ್ಬರು ಮತ್ತು ಉತ್ತರ 24 ಪರಗಣದಲ್ಲಿ ಮತ್ತೊಬ್ಬರು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಗೆ ಸಂಬಂಧಿಸಿದ ಆತಂಕವೇ ಅವರ ಸಾವಿಗೆ ಕಾರಣ ಎಂದು ಅವರ ಕುಟುಂಬಗಳು ಆರೋಪಿಸಿವೆ.

ಪಶ್ಚಿಮ ಬಂಗಾಳದ ಉತ್ತರ ದಿನಾಜ್‌ಪುರ ಜಿಲ್ಲೆಯಲ್ಲಿ, ಕಲಿಯಗಂಜ್‌ನ ಜನದಟ್ಟಣೆಯ ಮಾರುಕಟ್ಟೆಯಲ್ಲಿ ದಿನಗೂಲಿ ಕಾರ್ಮಿಕನೊಬ್ಬ ಕುಸಿದು ಬಿದ್ದು ಸಾವನ್ನಪ್ಪಿದ್ದಾನೆ.

ದಕ್ಷಿಣದಲ್ಲಿ, ಉತ್ತರ 24 ಪರಗಣ ಜಿಲ್ಲೆಯ ಬಸಿರ್ಹತ್‌ನಲ್ಲಿ ವೃದ್ಧ ಮಹಿಳೆಯೊಬ್ಬರು ಪಾರ್ಶ್ವವಾಯುವಿಗೆ ತುತ್ತಾಗಿ ಸಾವನ್ನಪ್ಪಿದರು. ಇತ್ತೀಚೆಗೆ ಆ ವ್ಯಕ್ತಿಗೆ SIR ವಿಚಾರಣೆಗೆ ಹಾಜರಾಗಲು ನೋಟಿಸ್ ಬಂದಿತ್ತು, ಆದರೆ ಆ ಮಹಿಳೆ ಕಳೆದ ವಾರ ವಿಚಾರಣೆಗೆ ಹಾಜರಾಗಿದ್ದರು. ಕಾಳಿಗಂಜ್‌ನಲ್ಲಿ, 50 ರ ಹರೆಯದ ಕಾರ್ಮಿಕ ಮತ್ತು ಬೋಚಡಂಗಾ ಚಂದೋಲ್ ಗ್ರಾಮದ ನಿವಾಸಿ ಲಕ್ಷ್ಮಿಕಾಂತ ರೇ ಸೋಮವಾರ ಮಧ್ಯಾಹ್ನ ಧಂಕೈಲಿ ಮಾರುಕಟ್ಟೆಯಲ್ಲಿ ಕುಸಿದು ಬಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.



ಅವರನ್ನು ಕಾಳಿಗಂಜ್ ರಾಜ್ಯ ಜನರಲ್ ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ಅವರು ಮೃತಪಟ್ಟಿದ್ದಾರೆ ಎಂದು ಘೋಷಿಸಲಾಯಿತು. ಅವರ ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ.

2002 ರ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇಲ್ಲದ ಕಾರಣ ತಮ್ಮ ಮತದಾನದ ಹಕ್ಕು ಕಳೆದುಕೊಳ್ಳುವ ಭಯದಿಂದ ರೇ ಅವರು SIR ವಿಚಾರಣೆಗೆ ನೋಟಿಸ್ ಪಡೆದ ನಂತರ ತೀವ್ರ ಮಾನಸಿಕ ಒತ್ತಡದಲ್ಲಿದ್ದರು ಎಂದು ಕುಟುಂಬ ಸದಸ್ಯರು ಹೇಳಿದ್ದಾರೆ.

ಜನವರಿ 19 ರಂದು ಅವರು ಬ್ಲಾಕ್ ಅಭಿವೃದ್ಧಿ ಅಧಿಕಾರಿಯ ಮುಂದೆ ಹಾಜರಾಗಬೇಕಿತ್ತು. ನೋಟಿಸ್ ಪಡೆದ ನಂತರ ಅವರ ತಂದೆ ಊಟ ಮಾಡುವುದು ಮತ್ತು ಕೆಲಸಕ್ಕೆ ಹೋಗುವುದನ್ನು ನಿಲ್ಲಿಸಿದ್ದಾರೆ ಎಂದು ಅವರ ಮಗ ಹಿರು ರೇ ಹೇಳಿದ್ದಾರೆ.

ಮರಣೋತ್ತರ ಪರೀಕ್ಷೆಯ ವರದಿ ಬಂದ ನಂತರವೇ ಸಾವಿಗೆ ನಿಖರವಾದ ಕಾರಣ ತಿಳಿದುಬರಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇನ್ನೊಂದು ಘಟನೆಯಲ್ಲಿ, ಉತ್ತರ 24 ಪರಗಣದ ಬದುರಿಯಾದಲ್ಲಿ, ಅನಿತಾ ಬಿಸ್ವಾಸ್ ಪಾರ್ಶ್ವವಾಯುವಿಗೆ ತುತ್ತಾಗಿ ನಿಧನರಾದರು, ಇದು ಅವರ ಕುಟುಂಬವು SIR ವಿಚಾರಣೆಯ ನಂತರ ಆತಂಕಕ್ಕೆ ಕಾರಣವಾಯಿತು. ಅವರ ಮಗ ಕಾಶಿನಾಥ್ ಬಿಸ್ವಾಸ್ ಅವರ ಹೆಸರು 1995 ರ ಮತದಾರರ ಪಟ್ಟಿಯಲ್ಲಿ ಕಾಣಿಸಿಕೊಂಡಿತ್ತು ಆದರೆ 2002 ರ ಮತದಾರರ ಪಟ್ಟಿಯಲ್ಲಿ ಕಾಣೆಯಾಗಿದೆ ಎಂದು ಹೇಳಿದರು.

# ಸವಿತಾ ಮಹರ್ಷಿ ಜಯಂತಿ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರ ಅಧ್ಯಕ್ಷತೆಯಲ್ಲಿ ಸವಿತಾ ಮಹರ್ಷಿ ಜಯಂತಿ ಕುರಿತು ಪೂರ್ವಸಿದ್ಧತಾ ಸಭೆ ಜರುಗಿತು.

ಸವಿತಾ ಮಹರ್ಷಿ ಜಯಂತಿಯ ದಿನಾಂಕವನ್ನು ಜಿಲ್ಲಾಡಳಿತ ಹಾಗೂ ಸಮಾಜದವರು ಸಮಾಲೋಚಿಸಿದ ನಂತರ ನಿಗದಿಪಡಿಸಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ತಾಲೂಕು ಮಟ್ಟದಲ್ಲಿಯೂ ಸವಿತಾ ಮಹರ್ಷಿ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ಅರ್ಥಪೂರ್ಣ ಆಚರಣೆಗೆ ಕ್ರಮ ಕೈಗೊಳ್ಳಬೇಕು. ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ



ಸಮಾಜದ ಸಾಧಕರನ್ನು ಸನ್ಮಾನಿಸುವ ಕಾರ್ಯಕ್ರಮ ಜರುಗಲಿದೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ವಾರ್ತಾ ಮತ್ತು ಸಾ.ಸಂ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು.

**ಯುವಜನ, ಸಾಹಿತ್ಯಾಭಿರುಚಿ ಸಂವಾದ, ಕವಿಗೋಷ್ಠಿ ಕಾರ್ಯಕ್ರಮದಲ್ಲಿ ವಿವೇಕಾನಂದಗೌಡ ಪಾಟೀಲ**

# ಸಾಹಿತ್ಯದಿಂದ ಪರಿಪೂರ್ಣ ವ್ಯಕ್ತಿತ್ವ ನಿರ್ಮಾಣ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾಹಿತ್ಯ, ಸಂಸ್ಕೃತಿಯ ವಾರಸುದಾರರಾಗಿರುವ ಯುವಜನಾಂಗ ವಿದ್ಯಾರ್ಥಿ ದೆಸೆಯಿಂದಲೇ ಅಭಿರುಚಿಯನ್ನು ಬೆಳೆಸಿಕೊಂಡು ಸಹೃದಯತೆ ಹೊಂದಬೇಕು. ಕಲೆ, ಸಾಹಿತ್ಯ, ಸಂಗೀತವಿಲ್ಲದ ಬದುಕು ಪಶು ಸಮಾನ ಎಂಬ ಹೇಳಿಕೆ ಇದೆ. ವಿವಿಧ ಕೃತಿಗಳನ್ನು ಓದುವ ಮೂಲಕ ವಿಶಾಲ ಜಗತ್ತಿಗೆ ತೆರೆದುಕೊಂಡಾಗ ಸಂಕುಚಿತತೆ ಕಡಿಮೆಯಾಗಿ ಪರಿಪೂರ್ಣ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹೇಳಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸ್ವಾಮಿ ವಿವೇಕಾನಂದ ಜನ್ಮದಿನದ ನಿಮಿತ್ತ ಯುವ ದಿನಾಚರಣೆ ಅಂಗವಾಗಿ ಜರುಗಿದ ಸಾಹಿತ್ಯಾಭಿರುಚಿ ಸಂವಾದ ಹಾಗೂ ಯುವ ಕವಿಗೋಷ್ಠಿಯ



ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮೂಹ ಮಾಧ್ಯಮಗಳಲ್ಲಿ ಹೆಚ್ಚು ಸಮಯ ವ್ಯಯ, ಮೊಬೈಲ್ ಗೀಳು, ಪರೀಕ್ಷಾಮುಖಿ ವ್ಯವಸ್ಥೆ, ಓದಿನ ಪೂರಕವಾಗಿರದ ಕುಟುಂಬ ವ್ಯವಸ್ಥೆ, ಶಿಕ್ಷಣ ಮಾಧ್ಯಮದಲ್ಲಿ ಇಂಗ್ಲೀಷಿನ ಪ್ರವೇಶ, ಪಾಲಕರ ಇಂಗ್ಲೀಷ್ ವ್ಯಾಮೋಹ, ಮಾರ್ಗದರ್ಶನದ ಕೊರತೆ ಮುಂತಾದ ಕಾರಣದಿಂದಾಗಿ ಇಂದಿನ ಯುವಕರು ಸಾಹಿತ್ಯದಿಂದ ವಿಮುಖರಾಗುತ್ತಿದ್ದಾರೆ. ಮತ್ತೊಂದೆಡೆ ಸಮೂಹ ಮಾಧ್ಯಮಗಳನ್ನೇ ಸಾಧನವಾಗಿಸಿಕೊಂಡು ಓದು ಮತ್ತು ಕ್ರಿಯಾಶೀಲತೆಯಲ್ಲೂ ತೊಡಗಿಕೊಂಡಿದ್ದಾರೆ. ಉತ್ತಮ ಕೃತಿಗಳನ್ನು ಅಂತರ್ಜಾಲದ ಮೂಲಕ ಪ್ರಚಾರ ಮಾಡಿ ಓದಿನ ಕಡೆಗೆ ಯುವಕರನ್ನು ಸೆಳೆಯುವ ಅಗತ್ಯವಿದೆ ಎಂಬ ಅಭಿಪ್ರಾಯಗಳನ್ನು ಎಂ.ಎಸ್. ಹುಲ್ಲೂರ, ವೀರೇಶ ಹರ್ಲಾಪೂರ, ರಾಜೇಶ್ವರಿ ಬಡ್ನಿ, ಅನುಪ್ರಿಯಾ ಬಾಪುರಿ, ಅನ್ನಪೂರ್ಣ ಕಾಡಣ್ಣವರ, ಮೇಘಾ ಹಾದಿಮನಿ ಸಂವಾದದಲ್ಲಿ ತಿಳಿಸಿದರು.

ನಂತರ ಜರುಗಿದ ಯುವ ಕವಿಗೋಷ್ಠಿಯಲ್ಲಿ ಗಣೇಶ ಪಾಟೀಲ, ಲಕ್ಷ್ಮೀ ಪಾಟೀಲ, ಸಂತೋಷ ಜಿಡ್ಡೇರಿ, ಸಂಗೀತಾ ಜೋಗಿನ, ಅನ್ನಪೂರ್ಣ ಕುರಿ, ಅನಿತಾ ಅರಳಿ ಕವನ ವಾಚಿಸಿದರು. ಅಮರೇಶ ರಾಂಪೂರ ಸ್ವಾಗತಿಸಿದರು. ರಕ್ಷಿತಾ ಗಿಡ್ನಂದಿ ನಿರೂಪಿಸಿದರು. ರಾಹುಲ ಗಿಡ್ನಂದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ವಿದ್ಯಾಧರ ದೊಡ್ಡಮನಿ, ಅನ್ನದಾನಿ ಹಿರೇಮಠ, ಶಶಿಕಾಂತ ಕೊರ್ಲಹಳ್ಳಿ, ವಿ.ಎಸ್. ದಲಾಲಿ, ಕೆ.ಎಸ್. ದಂಡಗಿ, ಕಿಶೋರಬಾಬು ನಾಗರಕಟ್ಟಿ, ಶೈಲಶ್ರೀ ಕಪ್ಪರದ, ಡಿ.ಎಸ್. ಬಾಪುರಿ, ಕೆ.ಎಸ್. ಬಾಳಿಕಾಯಿ, ಎ.ಎಸ್. ಮಕಾನದಾರ, ಬಸವರಾಜ ಗಣಪ್ಪನವರ, ಸಿ.ಎಂ. ಮಾರನಬಸರಿ, ರತ್ನಾ ಪುರಂತರ, ಶೈಲಜಾ ಗಿಡ್ನಂದಿ, ರಾಜಶೇಖರ ಕರಡಿ, ಬಿ.ಬಿ. ಹೊಳಗುಂದಿ, ಶಿಲ್ಪಾ ವ್ಯಾಗೇರಿ, ಐಶ್ವರ್ಯ ಧರಣೆಪ್ಪಗೌಡರ, ಪ್ರತಿಭಾ ಪಾಟೀಲ, ಪ್ರೇಮಾ ಕಾಡಣ್ಣವರ, ಎಂ.ಎಂ. ಮಕಾನದಾರ, ಎಸ್.ಪಿ. ಗೌಳಿ, ರವಿ ದೇವರಡ್ಡಿ, ಸಾಕ್ಷಿದೇವರಡ್ಡಿ, ವಿ.ಎಸ್. ದಿಂಡೂರ, ಅಂದಾನೆಪ್ಪ ವಿಭೂತಿ, ಸುಧೀರ ಘೋರ್ಪಡೆ, ರಾಮಚಂದ್ರ ಮೋನೆ, ಆನಂದ ಹಡಪದ, ಉಮಾ ಕಣವಿ ಮೊದಲಾದವರು ಉಪಸ್ಥಿತರಿದ್ದರು.

> ಯುವ ಸಮೂಹ ಅಂತರ್ಜಾಲದಲ್ಲಿ ತಮ್ಮನ್ನು ತಾವು ಕಳೆದುಕೊಳ್ಳದೇ ಸಾಹಿತ್ಯಾಭಿರುಚಿ ಬೆಳೆಸಿಕೊಳ್ಳಬೇಕು. ಶ್ರೀಮಂತ ಸಂಸ್ಕೃತಿಯ ಅರಿವನ್ನು ಹೊಂದಬೇಕು. ಯುವಕರಲ್ಲಿರುವ ಅಗಾಧ ಶಕ್ತಿ, ಸಾಮರ್ಥ್ಯ ವ್ಯಕ್ತಿಯ ಉನ್ನತಿಯ ಜೊತೆಗೆ ದೇಶದ ಪ್ರಗತಿಗೆ ಪೂರಕವಾಗಬೇಕು. ಆಗ ಮಾತ್ರ ಸ್ವಾಮಿ ವಿವೇಕಾನಂದರ ಆದರ್ಶ ಪಾಲನೆಯಾಗುತ್ತದೆ ಎಂದು ವಿವೇಕಾನಂದಗೌಡ ಪಾಟೀಲ ತಿಳಿಸಿದರು.

# ಮಹಿಳೆಯರಿಗೆ ಕಾನೂನಿನಲ್ಲಿ ಸಾಕಷ್ಟು ಅವಕಾಶಗಳಿವೆ




■ ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನದಲ್ಲಿ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಹಕ್ಕುಗಳನ್ನು ನೀಡಿದ್ದಾರೆ. ನಮ್ಮ ದೇಶದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಯುವ ಉದ್ದೇಶದಿಂದ ಕಾಯ್ದೆಯನ್ನು ಜಾರಿಗೆ ತರಲಾಗಿದೆ.. ಮಹಿಳೆಯರಿಗೆ ತೊಂದರೆಯಾದರೆ ಸರಕಾರದಿಂದ ಉಚಿತವಾಗಿ ವಕೀಲರನ್ನು ನೇಮಿಸುತ್ತಾರೆ ಎಂದು ಮಾನ್ಯ ಸಿವಿಲ್ ನ್ಯಾಯಾಧೀಶರಾದ ಶಿಲ್ಪಾ ತಿಮ್ಮಾಪೂರ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಶ್ರೀ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ಏರ್ಪಡಿಸಿದ್ದ ಮಹಿಳೆ ಮತ್ತು ಕಾನೂನು ಕುರಿತ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ಘಟಕದ ಅಧ್ಯಕ್ಷರಾದ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ವಹಿಸಿ ಮಾತನಾಡಿ, ಮಹಿಳೆಯರಿಗೆ ಕಾಯ್ದೆ-ಕಾನೂನುಗಳಲ್ಲಿ ಸಾಕಷ್ಟು ಸೌಲಭ್ಯಗಳಿವೆ. ಅದರ ಜೊತೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಹತ್ತಾರು ಸೌಲಭ್ಯಗಳು ಇದ್ದು, ಭಯಪಡುವ ಅವಶ್ಯಕತೆ ಇರುವುದಿಲ್ಲ. ಉದ್ಯಮ ಕ್ಷೇತ್ರದಲ್ಲಿ ಮಹಿಳಾ ಉದ್ಯಮಿಗಳಿಗೆ ಸಾಕಷ್ಟು ಅವಕಾಶಗಳನ್ನು ನೀಡಲಾಗಿದ್ದು, ಸಾಲ ಸೌಲಭ್ಯಗಳು ದೊರೆಯುತ್ತವೆ ಎಂದು ತಿಳಿಸಿದರು.

ಪದ್ಮಾ ಕಬಾಡಿ ಪ್ರಾರ್ಥಿಸಿದರು. ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಪೂರ್ಣಿಮಾ ಕೆ. ಆಟದ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಜಯಶ್ರೀ ತಾತನಗೌಡ ಪಾಟೀಲ ವಂದಿಸಿದರು. ಕಾರ್ಯಕ್ರಮದಲ್ಲಿ ಮಹಿಳಾ ಘಟಕದ ಪದಾಧಿಕಾರಿಗಳು ಹಾಗೂ ಸದಸ್ಯರು ಪಾಲ್ಗೊಂಡಿದ್ದರು.

# ಲಿಂಗದೀಕ್ಷೆಯಿಂದ ಆಧ್ಯಾತ್ಮಿಕ ಜ್ಞಾನ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹೂವಿನ ಶಿಗ್ಲಿ ಮಠದ ಜಾತ್ರಾ ಮಹೋತ್ಸವದ ನಿಮಿತ್ತ ವಟುಗಳಿಗೆ ಲಿಂಗದೀಕ್ಷೆ ಹಾಗೂ ಅಯ್ಯಾಚಾರ ಸಂಸ್ಕಾರ ಕಾರ್ಯಕ್ರಮವನ್ನು ಮಂಗಳವಾರ ಮೈಸೂರಿನ ಜಪದ ಕಟ್ಟಿ ಮಠ ಬನ್ನಿಕೊಪ್ಪದ ಪೂಜ್ಯರಾದ ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ನೆರವೇರಿಸಿದರು.

ಈ ವೇಳೆ ಆಶೀರ್ವಚನ ನೀಡಿದ ಬನ್ನಿಕೊಪ್ಪದ ಶ್ರೀಗಳು, ಲಿಂಗಧಾರಣೆ, ಶಿವಪೂಜೆಯಿಂದ ಆತ್ಮಬಲ ಹೆಚ್ಚಿ ಸಮಾಜದಲ್ಲಿನ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳುವ ಹಕ್ಕು ಪ್ರಾಪ್ತವಾಗುತ್ತದೆ. ವಿಭೂತಿ, ಲಿಂಗ, ಜೋಳಿಗೆ, ದಂಡ ಇವು ಸಂಸ್ಕಾರದ ಸಂಕೇತಗಳಾಗಿವೆ. ಲಿಂಗದೀಕ್ಷೆಯಿಂದ ಆಧ್ಯಾತ್ಮಿಕ ಜ್ಞಾನ, ಬದುಕಿನ ಶಾಂತಿ, ನೆಮ್ಮದಿಗೆ ಪೂರಕವಾದ ಅಂತಃಶಕ್ತಿ ವೃದ್ಧಿಸುತ್ತದೆ. ನಿತ್ಯದ ಬದುಕಿನಲ್ಲಿ ಆಧ್ಯಾತ್ಮಿಕತೆ, ಧ್ಯಾನ, ಪ್ರಾರ್ಥನೆ ರೂಢಿಸಿಕೊಳ್ಳಬೇಕು. ಗುರು-ಹಿರಿಯರಿಗೆ ಗೌರವ ನೀಡುವುದು, ನಮ್ಮ ಸಂಸ್ಕೃತಿ, ಆಚಾರ ವಿಚಾರಗಳನ್ನು ಬೆಳೆಸುವ ಮೊದಲಾದ ಗುಣಗಳನ್ನು ಮಕ್ಕಳಿಗೆ ತಿಳಿಸಿಕೊಡುವ ಕಾರ್ಯವಾಗಬೇಕು ಎಂದು ಹೇಳಿದರು.

ಮಂಗಳವಾರ ಶ್ರೀ ಮಠದಲ್ಲಿ 47ನೇ ಜಾತ್ರಾ ಮಹೋತ್ಸವದ ಪ್ರಯುಕ್ತ ಷಟ್‌ಸ್ಥಲ ಧ್ವಜಾರೋಹಣ ಕಾರ್ಯಕ್ರಮ ನೆರವೇರಿತು. ಧ್ವಜಾರೋಹಣ ನೆರವೇರಿಸಿದ ಹತ್ತಿಮತ್ತೂರಿನ ಶ್ರೀ ನಿಜಗುಣ ಮಹಾಸ್ವಾಮಿಗಳು ಮಾತನಾಡಿ, ಧರ್ಮ ಧ್ವಜ ಕೇವಲ ಜಾತ್ರಾ ಆರಂಭಕ್ಕಲ್ಲ, ಎಲ್ಲರೂ ರಾಷ್ಟ್ರ ಧ್ವಜಕ್ಕೆ ಗೌರವ ನೀಡುವಂತೆ ಧರ್ಮ ಧ್ವಜವನ್ನೂ ಗೌರವಿಸಬೇಕು. ಹೂವಿನಶಿಗ್ಲಿ ಮಠವು ಗ್ರಾಮೀಣ ಭಾಗದ ಬಡವರು, ಅನಾಥ ಮಕ್ಕಳಿಗೆ ಹತ್ತಾರು ಸಂಕಷ್ಟಗಳ ನಡುವೆಯೂ ತ್ರಿವಿಧ ದಾಸೋಹ ಸೇವೆಯ ಜತೆಗೆ ಲಿಂ. ನಿರಂಜನ ಶ್ರೀಗಳು ಹಾಕಿಕೊಟ್ಟ ಮಠದ ಪರಂಪರೆ ಉಳಿಸುತ್ತ, ಧರ್ಮ, ಸಂಸ್ಕಾರಗಳನ್ನು ಬಿತ್ತುವ ಕೆಲಸ ಮಾಡುತ್ತಾ ದೊಡ್ಡ ಶಕ್ತಿಯಾಗಿ ಬೆಳೆಯುತ್ತಿದೆ ಎಂದು ನುಡಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಶ್ರೀಮಠದ ಚನ್ನವೀರಮಹಾಸ್ವಾಮಿಗಳು ಮಾತನಾಡಿ, ಹೂವಿನಶಿಗ್ಲಿ ಸೇರಿ ನಾಡಿನಾದ್ಯಂತ ಇರುವ ಭಕ್ತರು ಮಾಡುತ್ತಿರುವ ಸೇವಾಕಾರ್ಯದಿಂದ ಮಠದಲ್ಲಿ ತ್ರಿವಿಧ ಸೇವೆ, ಜಾತ್ರೆ, ಮಹೋತ್ಸವ, ಪರಂಪರೆ ಉಳಿಸಿಕೊಂಡು ಬರಲು ಸಾಧ್ಯವಾಗುತ್ತಿದೆ ಎಂದರು.

ಕಾರ್ಯಕ್ರಮದ ನೇತೃತ್ವ ವಹಿಸಿದ ಮಠಾಧ್ಯಕ್ಷರಾದ ಚನ್ನವೀರ ಶ್ರೀಗಳು ಆಶೀರ್ವಚನ ನೀಡಿದರು. ಗುರುಕುಲ ಶಿಕ್ಷಕರು ಹಾಗೂ ಸುತ್ತಮುತ್ತಲಿನ ಭಕ್ತರು ಪಾಲ್ಗೊಂಡಿದ್ದರು. ಕೆ.ಎಸ್. ಇಟಗಿಮಠ ನಿರೂಪಿಸಿದರು.

# ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ 90 ದಿನಗಳ ಡ್ರೈವ್

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ದಿನಾಂಕ 2-01-2026ರಿಂದ ನಡೆಯಲಿರುವ ವಿಶೇಷ ಅಭಿಯಾನ-ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ-90 ದಿನಗಳ ಡ್ರೈವ್‌ನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ.

ಸದರಿ ಅಭಿಯಾನದಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟಾರು ಅಪಘಾತ ನ್ಯಾಯಾಧಿಕರಣದ ಪ್ರಕರಣಗಳು, ಚೆಕ್ ಅಮಾನ್ಯದ ಪ್ರಕರಣಗಳು, ವಾಣಿಜ್ಯ ಪ್ರಕರಣಗಳು, ಸೇವಾ ಪ್ರಕರಣಗಳು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಗ್ರಾಹಕ ವ್ಯಾಜ್ಯ ಪ್ರಕರಣಗಳು, ಡಿ.ಆರ್.ಟಿ ಪ್ರಕರಣಗಳು, ಪಾಲುದಾರಿಕೆ ಪ್ರಕರಣಗಳು, ಭೂ-ಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ಸುವರ್ಣಾವಕಾಶವಿದೆ.

ಪಕ್ಷಗಾರರು, ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದ್ದಲ್ಲಿ ನ್ಯಾಯಾಲಯಗಳಿಂದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ಸೂಚಿಸಿಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರರನ್ನು ಕರೆಸಿಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಚದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ನ್ಯಾಯಾಲಯಗಳ ಅವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನಾಗವೇಣಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 800 ಗ್ರಾಂ ಇದ್ದ ಚಿನ್ನ 466 ಗ್ರಾಂ ಹೇಗಾಯ್ತು?!

▶▶ ಮೊದಲನೇ ಪುಟದಿಂದ

ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ಚಿನ್ನ 100 ವರ್ಷಕ್ಕೂ ಹಳೆಯದ್ದು ಎಂದು ಹೇಳುತ್ತಾರೆ. ತನಿಖೆ ನಡೆಯದೇ 100 ವರ್ಷದ್ದು ಎಂದು ಯಾವ ಆಧಾರದ ಮೇಲೆ ಹೇಳುತ್ತಾರೆ? ಪಂಚನಾಮೆ ನಡೆಸಿ ಪಂಚರ ಸಹಿ ಮಾಡಲಾಗಿದೆ. ಆದರೆ, ಮನೆ ಮಾಲಕರ ಸಹಿ ಪಡೆದಿಲ್ಲ. ತರಾತುರಿಯಲ್ಲಿ ಒಬ್ಬೊಬ್ಬರು ಒಂದೊಂದು ಹೇಳಿಕೆ ನೀಡುತ್ತಿದ್ದಾರೆ.

ಬಯಲು ವಸ್ತು ಸಂಗ್ರಹಾಲಯಕ್ಕೆ ಹಣ ತರಿಸುವ ಉದ್ದೇಶದಿಂದ ಈ ರೀತಿ ಕುತಂತ್ರ ಮಾಡುತ್ತಿದ್ದಾರೆ ಎಂದು ಗಂಭೀರವಾಗಿ ಆರೋಪಿಸಿದರು.

ಲಕ್ಕುಂಡಿ ಗ್ರಾಮದ ರೈತ ಶರಣಪ್ಪ ಕಮತರ ಎನ್ನುವರ ಜಮೀನನ್ನು ಉತ್ಖನನಕ್ಕಾಗಿ ಸ್ವಾಧೀನ ಮಾಡಿಕೊಂಡಿದ್ದಾರೆ. ಕಳೆದ 18 ವರ್ಷದಿಂದ ಆ ಜಮೀನು ಪಾಳು ಬಿದ್ದಿದೆ.

ಮೊದಲ ಒಂದು ವರ್ಷ ಬೆಳೆ ಪರಿಹಾರ ನೀಡಿ ನಂತರ ಒಂದು ರೂಪಾಯಿ ಹಣ ನೀಡಿಲ್ಲ. ಇದೇ ಪರಿಸ್ಥಿತಿ ರಿತ್ತಿ ಕುಟುಂಬಕ್ಕೂ ಆಗುವ ಸಾಧ್ಯತೆ ಇದೆ ಎಂದರು.

ಈ ವೇಳೆ ಜಿ.ಕೆ. ಕೊಳ್ಳಿಮಠ, ಪ್ರಫುಲ್ ಪುಣೇಕರ, ಶೇಖರ್ ಗೌರಿಪುರ, ಬಸನಗೌಡ ನಾಡಗೌಡ್ರ ಉಪಸ್ಥಿತರಿದ್ದರು.

# ಬಾಲಕನ ಪ್ರಾಮಾಣಿಕತೆ ನಿಧಿಗಿಂತ ದೊಡ್ಡದು

▶▶ ಮೊದಲನೇ ಪುಟದಿಂದ



ಈ ಸಂದರ್ಭದಲ್ಲಿ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರ ಸದಸ್ಯ ಸಿದ್ದಲಿಂಗೇಶ ಪಾಟೀಲ, ಭಾರತೀಯ ಪುರಾತತ್ವ ಇಲಾಖೆ ಅಧಿಕಾರಿ ರಮೇಶ ಮೂಲಿಮನಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಲಕ್ಕುಂಡಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಹಾಗೂ ನಿಧಿ ಸಿಕ್ಕ ಸ್ಥಳದ ಮಾಲಕರು, ಗ್ರಾ.ಪಂ ಸದಸ್ಯರು, ಪುರಾತತ್ವ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನಿಧನ

## ಶಾಂತಾ ನಾಗರಾಳ (ಹರ್ಲಾಪೂರ)

**ಗದಗ:** ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ನಿವಾಸಿ ಶಾಂತಾ ಶಿವಪ್ಪ ನಾಗರಾಳ (ಹರ್ಲಾಪೂರ) (73) ಮಂಗಳವಾರ ನಿಧನರಾದರು.

ಮೃತರು ಇಬ್ಬರು ಪುತ್ರರು, ನಾಲ್ವರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಗಣೇಶಸಿಂಗ್ ರಜಪೂತ



**ಬೆಟಗೇರಿ :** ಸ್ಥಳೀಯ ಪೆಂಡಾರ ಓಣಿಯ ನಿವಾಸಿ ಗಣೇಶಸಿಂಗ್ ಶಂಕರಸಿಂಗ್ ರಜಪೂತ ಇವರು ತಮ್ಮ 40ನೇ ವಯಸ್ಸಿನಲ್ಲಿ ನಿಧನರಾದರು. ಮೃತರು ಸಹೋದರ, ಸಹೋದರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದು, ಮೃತರ ಅಂತ್ಯಕ್ರಿಯೆ ದಿ. 13 ರಂದು ಜರುಗಿತು.

# ಇನ್ನರ್ ವ್ಹೀಲ್ ಸಂಸ್ಥಾಪನಾ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ನೇಹ ಮತ್ತು ಸೇವೆಯ ಉದ್ದೇಶದಿಂದ ಸ್ಥಾಪಿತಗೊಂಡ ಅಂತಾರಾಷ್ಟ್ರೀಯ ಇನ್ನರ್ ವ್ಹೀಲ್ ಸಂಸ್ಥೆಯ 102ನೇ ವರ್ಷದ ಸಂಸ್ಥಾಪನಾ ದಿನಾಚರಣೆಯನ್ನು ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರದ ಪ್ರಕೃತಿಯ ಸೊಬಗಿನಲ್ಲಿ ಆಚರಿಸಿದರು.

ಕ್ಲಬ್ಬಿನ ಅಧ್ಯಕ್ಷರಾದ ಅಶ್ವಿನಿ ಜಗತಾಪ್ ಅವರು ಸೇವೆಯನ್ನು ಮೂಲ ಉದ್ದೇಶವಾಗಿರಿಸಿಕೊಂಡು ಸ್ಥಾಪಿಸಿದ, ಇನ್ನರ್ ವ್ಹೀಲ್ ಸಂಸ್ಥೆಯ ಸಂಸ್ಥಾಪನಾ ದಿನಾಚರಣೆಯನ್ನು ಪ್ರಕೃತಿಯ ಮಡಿಲಿನಲ್ಲಿರುವ ಯು.ಕೆ ನೇಚರ್ಸ್ ಸ್ಟೇಯಲ್ಲಿ ಹಮ್ಮಿಕೊಂಡ ಕಾರಣ ಮತ್ತು ಕಾರ್ಯಗಳ ಬಗ್ಗೆ ಮಾತನಾಡಿದರು.

ಸಂಸ್ಥೆಯ ಹಿರಿಯರು ಮತ್ತು ಮಾಜಿ ಅಧ್ಯಕ್ಷರಾದ ಶ್ರೇಯಾ ಪವಾಡಶೆಟ್ಟರ್ ಮಾತನಾಡಿ, 1924ರ ಜನವರಿ 10ರಂದು ಮಾರ್ಗರೇಟ್ ಒಲಿವರ್ ಗೋಲ್ಡಿಂಗ್ ಅವರು ಇಂಗ್ಲೆಂಡಿನ ಮ್ಯಾಂಚೆಸ್ಟರ್‌ನಲ್ಲಿ ಇನ್ನರ್ ವ್ಹೀಲ್ ಕ್ಲಬ್ ಸ್ಥಾಪಿಸಿದ ರೀತಿ, ಬೆಳೆದುಬಂದ ಹಾದಿಯನ್ನು ವಿವರಿಸಿದರು.

ಕಾರ್ಯಕ್ರಮವನ್ನು ಕಾರ್ಯದರ್ಶಿ ಶಿವಲೀಲಾ ಅಕ್ಕಿ ನಿರೂಪಿಸಿದರು. ಇನ್ನರ್ ವ್ಹೀಲ್ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಪ್ರವಾಸವು ಆಟ, ಸಂಗೀತ, ನೃತ್ಯದೊಂದಿಗೆ ಆರಂಭವಾಗಿ ಮುಸ್ಸಂಜೆಯ ತಂಪಿನಲ್ಲಿಯೂ ಬೆಚ್ಚನೆಯ ಅನುಭವವನ್ನು ನೀಡಿದರೆ, ನಸುಕಿನ ಪಕ್ಷಿಗಳ ಚಿಲಿಪಿಲಿ ಹಾಗೂ ನೀರಿನ ಕಲರವದ ನಡುವಿನ ಪಯಣ ಪ್ರವಾಸಕ್ಕೆ ಶೋಭೆಯನ್ನು ತಂದು ಕೊಟ್ಟಿತು.

ಮಾಜಿ ಅಧ್ಯಕ್ಷರುಗಳಾದ ಆಶಾ ಹುಕ್ಕೇರಿ, ಆಶಾ ಪಟ್ಟಣಶೆಟ್ಟಿ, ಸುಲೋಚನಾ ಐಹೊಳ್ಳಿ, ಖಜಾಂಚಿ ಪುಷ್ಪಾ ಭಂಡಾರಿ, ಸಂಪಾದಕರಾದ ವೀಣಾ ಕಾವೇರಿ, ಸಿಪಿಸಿಸಿ ಮೀನಾಕ್ಷಿ ಕೊರವಣ್ಣನವರ್, ಕೋ-ಸಿಪಿಸಿಸಿ ಶಿಲ್ಪಾ ಅಕ್ಕಿ, ಸದಸ್ಯರುಗಳಾದ ಸುಶೀಲಾ ಕೋಟಿ, ಉಮಾ ಮುನವಳ್ಳಿ, ಉಮಾ ಕವಳಿಕಾಯಿ, ಸಂಧ್ಯಾ ಕೋಟಿ, ಸುನಂದಾ ಭೂಮರೆಡ್ಡಿ, ಸುವರ್ಣಾ ಮದರಿಮಠ, ಪ್ರತಿಭಾ ಭದ್ರಶೆಟ್ಟಿ, ಪವಿತ್ರಾ ಬಿರಾದರ್, ಗೀತಾ ನಾಲ್ವಾಡ, ದೀಪಾ ಪಟ್ಟಣಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

# ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಪೂರ್ವಸಿದ್ಧತಾ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯನ್ನು ಜನವರಿ 21ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕು ಮಟ್ಟದಲ್ಲಿಯೂ ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ಅರ್ಥಪೂರ್ಣ ಆಚರಣೆಗೆ ಕ್ರಮ ಕೈಗೊಳ್ಳಬೇಕು. ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ



ಸಮಾಜದ ಸಾಧಕರನ್ನು ಸನ್ಮಾನಿಸುವ ಕಾರ್ಯಕ್ರಮ ಜರುಗಲಿದೆ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾದಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಗೋವಿನಜೋಳ ಖರೀದಿ: ನೋಂದಣಿಗಾಗಿ ಸರದಿ ಸಾಲು ಹಿಡಿದ ರೈತರು

# ಎಂಎಸ್‌ಪಿ ಹೋಯ್ತು, ಪಿಡಿಪಿಎಸ್ ಬಂತು!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ನವೆಂಬರ್ ತಿಂಗಳಿಂದ ಡಿಸೆಂಬರ್ 1ರವೆಗೂ ಸುಮಾರು 18 ದಿನಗಳ ಕಾಲ ಗೋವಿನಜೋಳ ಖರೀದಿ ಕೇಂದ್ರ ಪ್ರಾರಂಭಿಸುವಂತೆ ಆಗ್ರಹಿಸಿ ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸಿದ್ದರ ಫಲವಾಗಿ ಡಿ. 1ರಿಂದಲೇ ಖರೀದಿ ಕೇಂದ್ರ ಪ್ರಾರಂಭವಾಗುವದರ ಜೊತೆ ರೈತರ ನೋಂದಣಿ ಕಾರ್ಯಗಳು ಪ್ರಾರಂಭವಾದವು.

ಆದರೆ ಖರೀದಿ ಕೇಂದ್ರದ ನೋಂದಣಿ ಸಮಯದಲಿಯೇ ಅನೇಕ ಸಮಸ್ಯೆಗಳು ಕಾಡಿದ್ದು, ರೈತರು ಪ್ರತಿದಿನ ಸರದಿ ಸಾಲಿನಲ್ಲಿ ನಿಂತು ಸಾವಿರಾರು ರೈತರು ನೋಂದಣಿ ಮಾಡಿಕೊಂಡಿದ್ದರು. ಇದೀಗ ಸರಕಾರ ಕಡಿಮೆ ದರಕ್ಕೆ ಮಾರಿದ ರೈತರಿಗೆ ಕ್ವಿಂಟಲ್‌ಗೆ 250 ರೂಗಳ ಪ್ರೋತ್ಸಾಹಧನ ನೀಡುವ ಘೋಷಣೆ ಹೊರಡಿಸಿದ್ದು, ಅದಕ್ಕೆ ನೋಂದಣಿ ಮಾಡಿಕೊಳ್ಳಲು ಕಳೆದ ಮೂರು ದಿನಗಳಿಂದ ರೈತರು ಸಾಲುಗಟ್ಟಿ ನಿಲ್ಲುವಂತಾಗಿದೆ. ಒಟ್ಟಿನಲ್ಲಿ



ಈ ಬಾರಿ ಗೋವಿನಜೋಳ ಬೆಳೆದ ರೈತರ ಗೋಳು ಮುಗಿಯದಂತಾಗಿದೆ.

ಗೋವಿನಜೋಳ ಎಂಎಸ್‌ಪಿ (2400)ರೂ ಅಡಿಯಲ್ಲಿ ಖರೀದಿ ಪ್ರಾರಂಭಿಸಲು ಸರ್ಕಾರ ಆದೇಶ ಹೊರಡಿಸಿ ಪಟ್ಟಣದ ಟಿಎಪಿಎಂಎಸ್ ಮೂಲಕ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಿತ್ತು. ಈ ನಡುವೆ ಏಕಾಏಕಿ ಅದನ್ನು ಪೂರ್ಣಗೊಳಿಸದೇ 2150 ರೂ ಮಾರುಕಟ್ಟೆ ಮಧ್ಯಪ್ರವೇಶ ದರ (ಪಿಡಿಪಿಎಸ್) ಅಡಿಯಲ್ಲಿ ನೋಂದಣಿ ಪ್ರಾರಂಭಿಸಿದ್ದು, ಈಗಾಗಲೇ ಎಂಎಸ್‌ಪಿ ಅಡಿಯಲ್ಲಿ ಹೆಸರು ನೋಂದಾಯಿಸಿಕೊಂಡವರ ಗತಿ ಏನು ಎನ್ನುವ ಪ್ರಶ್ನೆ ರೈತರಲ್ಲಿ ಕಾಡಲಾರಂಬಿಸಿದೆ.

ಪಟ್ಟಣದ ಟಿಎಪಿಸಿಎಂಎಸ್‌ನಲ್ಲಿ ಖರೀದಿ ಕೇಂದ್ರ ಪ್ರಾರಂಭಿಸಿದ ಮೇಲೆ 243 ಇಥೆನಾಲ್, 651 ಪೌಲ್ಟ್ರೀ ಹಾಗೂ 770 ಕೆಎಂಎಫ್‌ಗಳಲ್ಲಿ ರೈತರು ನೋಂದಣಿ ಮಾಡಿಕೊಂಡಿದ್ದರು. ಇದರಲ್ಲಿ ಕೆಎಂಎಫ್ ಹೊರತುಪಡಿಸಿದರೆ 300 ರೈತರ ಗೋವಿನಜೋಳ ಎಂಎಸ್‌ಪಿ ದರದಲ್ಲಿ ಖರೀದಿಯಾಗಿದೆ. ಇನ್ನುಳಿದ ಸುಮಾರು 600ಕ್ಕೂ ಅಧಿಕ ರೈತರ ಬೆಳೆ ಖರೀದಿ ಪ್ರಕ್ರೀಯೆ ಆಗುವದಕ್ಕಿಂತ ಮುಂಚೆಯೇ ಖರೀದಿ ಕೇಂದ್ರದ ಪ್ರಕ್ರಿಯೆ ಏಕಾಏಕಿ ಸ್ಥಗಿತಗೊಂಡಿರುವದರಿಂದ ರೈತರಿಗೆ ದಿಕ್ಕು ತೋಚದಂತಾಗಿದೆ. ಎಂಎಸ್‌ಪಿ ಅಡಿಯಲ್ಲಿ ನೋಂದಾಯಿಸಿಕೊಂಡ ಅಂದಾಜು ಶೇ. 70ಕ್ಕೂ ಅಧಿಕ ರೈತರ ವಿಲೇವಾರಿ ಬಾಕಿ ಇದೆ. ಒಟ್ಟಿನಲ್ಲಿ ಖರೀದಿ ಕೇಂದ್ರ ಒಂದು ರೀತಿಯ ಗೊಂದಲದ ಗೂಡಾಗಿದ್ದು, ಯಾವ ಕಡೆ ಹೋದರೆ ಸೂಕ್ತ ಎನ್ನುವದು ರೈತರಿಗೆ ತೋಚದಂತಾಗಿದೆ.

ಇದೀಗ ಮಾರುಕಟ್ಟೆ ಮಧ್ಯಪ್ರವೇಶ (ಪಿಡಿಪಿಎಸ್) ಯೋಜನೆಯಲ್ಲಿ ರೈತರು ನೋಂದಣಿ ಮಾಡಿಕೊಳ್ಳಲು ಸರಕಾರ ಅವಕಾಶ ಕಲ್ಪಿಸಿದ್ದು, ಇದು ಆಯಾ ತಾಲೂಕುಗಳ ಎಪಿಎಸಿಗಳಲ್ಲಿ ಖರೀದಿಗೆ ಅವಕಾಶ ನೀಡಿದೆ. ಅಂದರೆ ಇಲ್ಲಿ ನಿತ್ಯ ವ್ಯಾಪಾರಸ್ಥರು ಗೋವಿನಜೋಳಕ್ಕೆ ಬೆಲೆಯನ್ನು ನಿಗದಿಪಡಿಸಿ ರೈತರಿಂದ ಖರೀದಿ ಮಾಡಿಕೊಳ್ಳುತ್ತಾರೆ.

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳ 25 ಗ್ರಾಮಗಳಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳಲ್ಲಿ ರೈತರು ತಮ್ಮ ಬೆಳೆಯನ್ನು ನೋಂದಣಿ ಮಾಡಿಕೊಳ್ಳಬಹುದಾಗಿದ್ದು, ನೋಂದಣಿಯಾದ ನಂತರ ರೈತರು 11 ಜಿಲ್ಲೆಯ ಯಾವುದೇ ಎಪಿಎಂಸಿ ಮಾರುಕಟ್ಟೆಯಲ್ಲಿಯ ಯಾವುದೇ ದಲಾಲಿ ಅಂಗಡಿಗಳಲ್ಲಿ ಅಂದಿನ ದರಕ್ಕೆ ಮಾರಾಟ ಮಾಡಬಹುದು. ಈಗಾಗಲೇ ಪಿಡಿಪಿಎಸ್ ಯೋಜನೆಯಲ್ಲಿ ಮಂಗಳವಾರ ಸಂಜೆಯವರೆಗೂ 450ರಷ್ಟು ರೈತರು ಹೆಸರು ನೋಂದಾಯಿಸಿಕೊಂಡಿದ್ದಾರೆ ಎನ್ನಲಾಗಿದೆ.

ಈ ಬಗ್ಗೆ ಎಪಿಎಂಸಿ ಕಾರ್ಯದರ್ಶಿ ಸಿ.ಎ. ಹೂಗಾರ ಹೇಳಿಕೆ ನೀಡಿ, ಗೋವಿನಜೋಳ ಬೆಳೆದ ರೈತರಿಗೆ ಮಾರುಕಟ್ಟೆ ಮಧ್ಯಪ್ರವೇಶ (ಪಿಡಿಪಿಎಸ್) ಯೋಜನೆಯಲ್ಲಿ ಹೆಸರು ನೋಂದಾಯಿಸುವ ಕಾರ್ಯ ನಡೆದಿದ್ದು, ಸರಕಾರ ನಿಗದಿಪಡಿಸಿದ ಪ್ರೋತ್ಸಾಹಧನ ಪಡೆಯುವ ರೈತರು ಮಾರಾಟಕ್ಕೆ ಹೆಸರು ನೋಂದಾಯಿಸುವದು ಕಡ್ಡಾಯವಾಗಿದೆ.

ರೈತರು ಹೆಸರು ನೋಂದಾಯಿಸಿಕೊಳ್ಳಲು ಸಿಬ್ಬಂದಿಗಳನ್ನು ನೇಮಿಸಲಾಗಿದೆ. ರೈತರು ಸಹಕಾರದಿಂದ ತಮ್ಮ ಹೆಸರು ನೋಂದಾಯಿಸಿಕೊಳ್ಳಲು ಮನವಿ ಮಾಡಿದ್ದಾರೆ.

# ಪ್ರಜ್ವಲ್ ರಿತ್ತಿ ಕುಟುಂಬದ ಕಾರ್ಯ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರಾಮಾಣಿಕತೆಯಿಂದ ನಿಧಿಯನ್ನು ಸರಕಾರಕ್ಕೆ ಮರಳಿಸಿರುವ ಪ್ರಜ್ವಲ್ ರಿತ್ತಿ ಕುಟುಂಬಕ್ಕೆ ನಿಧಿಯ ಸಮಾನಾಂತರ ಸಹಾಯ ಧನ ನೀಡುವ ಕುರಿತಂತೆ ಗ್ರಾಮಸ್ಥರ ಒತ್ತಾಯವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಗಮನಕ್ಕೆ ತಂದು ಸೂಕ್ತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಮಾಜಿ ಸಚಿವ ಬಿ.ಆರ್. ಯಾವಗಲ್ ಹೇಳಿದರು.

ಗ್ರಾಮದ ಪ್ರಜ್ವಲ್ ರಿತ್ತಿ ಅವರ ಕುಟುಂಬವನ್ನು ಭೇಟಿ ಮಾಡಿ ಮಾತನಾಡಿದ ಅವರು ರಿತ್ತಿ ಕುಟುಂಬದವರು ಕಡು ಬಡವರಾಗಿದ್ದಾರೆ. ಸಾಕಷ್ಟು ಸಂಪತ್ತು ಸಿಕ್ಕಿದ್ದರೂ ಸಹಿತ ಯಾವುದೇ ಫಲಾಫೇಕ್ಷೆಯಿಲ್ಲದೆ ಸರಕಾರಕ್ಕೆ ಮರಳಿ ನೀಡಿರುವ ಕಾರ್ಯ ಶ್ಲಾಘನೀಯ. ಪ್ರಜ್ವಲ್‌ಗೆ ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ವಿವಿಧ ವಿಭಾಗಗಳ ಪ್ರಶಸ್ತಿಗೆ ಪರಿಗಣಿಸುವುದರ ಮೂಲಕ ನೆರವಿನ ಹಸ್ತವನ್ನು ನೀಡುವ ಮನವಿಯನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗವುದು ಎಂದರು.

ರಿತ್ತಿ ಕುಟುಂಬಕ್ಕೆ ಪರ್ಯಾಯ ವಸತಿ ಸೌಕರ್ಯ, ಶಿಕ್ಷಣ ಸೌಲಭ್ಯ, ಸೇರಿದಂತೆ ಅನೇಕ ಸಹಾಯಗಳು ದೊರಕುವಂತೆ ಮಾಡುವ ಕಾರ್ಯವನ್ನು ಜಿಲ್ಲಾಡಳಿತ, ಜಿಲ್ಲಾ ಉಸ್ತುವಾರಿ ಮಂತ್ರಿಗಳು, ಹಾಗೂ ಸರಕಾರ ಮಾಡಲಿದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗಳಿ, ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ, ನರಗುಂದ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ವಿವೇಕ ಯಾವಗಲ್, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಗ್ರಾ.ಪಂ ಸದಸ್ಯರಾದ ಪೀರಸಾಬ ನದಾಫ್, ಶ್ರೇಯಾ ಕಟಿಗ್ಗಾರ, ಚಂದ್ರವ್ವ ರಿತ್ತಿ, ಅನ್ನಪೂರ್ಣ ರಿತ್ತಿ, ಫಕ್ಕೀರಮ್ಮ ಬೇಲೇರಿ, ಶಾಂತವ್ವ ಮಣಕವಾಡ, ರಜೀಯಾ ಬೇಗಂ ತಹಸೀಲ್ದಾರ, ಮುಖಂಡರಾದ ವೀರಯ್ಯ ಗಂಧದ, ನಿಂಗಪ್ಪ ಗುಂಜಳ, ಅಂದಾನಪ್ಪ ಕಣವಿ, ಮಂಜುನಾಥ ಕಟಿಗ್ಗಾರ, ವಾಸಿಂ ಮಸೂತಿಮನಿ, ಮರದಾನಲಿ ದೊಡ್ಡಮನಿ, ರಸೂಲಸಾಬ ದೌಲತ್ತರ, ಸರ್ಫರಾಜ್, ರಾಘವೇದ್ರ ವಿಠೋಜಿ, ಫಾರೂಕ್ ಮುಲ್ಲಾ, ಮಲ್ಲಪ್ಪ ಸೊರಟೂರ ರಿಯಾಜ್ ಮಸೂತಿಮನಿ ಇದ್ದರು.

# ರೈತ ಸಂಘದಿಂದ ಜಿಲ್ಲಾಧಿಕಾರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯೂ ಸೇರಿದಂತೆ ರಾಜ್ಯಾದ್ಯಂತ ಹಿಂಗಾರು ಹಂಗಾಮಿನಲ್ಲಿ ಕಡಲೆ ಬೆಳೆಯಲಾಗಿದ್ದು, ಈಗಾಗಲೇ ಕಡಲೆ ಕಟಾವು ಮಾಡಲಾಗಿದೆ. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಂಡು ಗದಗ ಜಿಲ್ಲಾದ್ಯಂತ ಕಡಲೆ ಖರೀದಿ ಕೇಂದ್ರ ಆರಂಭಿಸಬೇಕೆಂದು ಒತ್ತಾಯಿಸಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ರುದ್ರಪ್ಪ ಕೋಳೂರ ಹಾಗೂ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿಗಳ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದರು.




ಪ್ರತಿ ಕ್ವಿಂಟಾಲ್ ಕಡಲೆಗೆ 10 ಸಾವಿರ ರೂ ಹೊಸ ಬೆಂಬಲ ಬೆಲೆ ನಿಗದಿ ಮಾಡಿ ರೈತರಿಂದ 50 ಕ್ವಿಂಟಾಲ್ ಕಡಲೆ ಕಾಳನ್ನು ಸರ್ಕಾರ ಖರೀದಿಸಬೇಕು. ಕಳೆದ ವರ್ಷ ಕೇಂದ್ರ ಸರ್ಕಾರ ಆದೇಶಿಸಿದ ಹಳೆ ಬೆಲೆಯನ್ನು ರದ್ದುಗೊಳಿಸಿ ಹೊಸ ಬೆಲೆಗೆ ಕಡಲೆ ಖರೀದಿಸಬೇಕು. ಕಡಲೆ ಖರೀದಿಸಿದ ಒಂದು ತಿಂಗಳೊಳಗೆ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಜಮಾವಣೆ ಮಾಡಬೇಕು. ರೈತರು ಮಾರುಕಟ್ಟೆಗೆ ಧಾನ್ಯ ತಂದ ಮೇಲೆ ಖರೀದಿ ಕೇಂದ್ರ ತೆರೆಯುವುದರಲ್ಲಿ ಅರ್ಥವಿಲ್ಲ. ಸರ್ಕಾರ ಇನ್ನೊಂದು ವಾರದೊಳಗೆ ಖರೀದಿ ಪ್ರಕ್ರಿಯೆ ಆರಂಭಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡ ಬಸವರಾಜ ಹೂಗಾರ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಹೆಸರು ಬೆಳೆಗೆ ಬೆಂಬಲ ಪ್ರಯೋಜನವಾಗಲಿಲ್ಲ. ಈಗ ಮೆಕ್ಕೆಜೋಳದ ಬೆಂಬಲ ಬೆಲೆಯಲ್ಲಿಯೂ ಕೂಡ ದಿನಕ್ಕೊಂದು ಹೊಸ ಆದೇಶ ಹೊರಡಿಸಿ ಸರ್ಕಾರದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಜಿಲ್ಲೆಯ ರೈತರು ಕಂಗಾಲಾಗಿದ್ದಾರೆ ಎಂದರು.

ಸರ್ಕಾರದಿಂದ ಕಡಲೆ ಖರೀದಿ ಕೇಂದ್ರ ತೆರೆಯಲು ವಿಳಂಬವಾದರೆ ರೈತ ಸಂಘದಿಂದ ಉಗ್ರ ಹೋರಾಟ ಮಾಡುವುದಾಗಿ ರೈತ ಸಂಘದ ಹಾವೇರಿ ಅಧ್ಯಕ್ಷ ಯಲ್ಲಪ್ಪ ವಾಲ್ಮೀಕಿ ಎಚ್ಚರಿಸಿದ್ದಾರೆ.




ಪೌರಕಾರ್ಮಿಕರಿಗೆ ಉಪಯೋಗವಾಗಲೆಂದು ನಿರ್ಮಿಸಿರುವ ಒಳಚರಂಡಿ ಸ್ವಚ್ಛತೆ ಯಂತ್ರದ ( GENROBOTICS) ಪ್ರಾತ್ಯಕ್ಷಿಕೆಯನ್ನು ಮಂಗಳವಾರ ಗದುಗಿನ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ವೀಕ್ಷಿಸಿದರು. ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಸಫಾಯಿ ಕರ್ಮಚಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಯುವರಾಜ ಬಳ್ಳಾರಿ, ರಮೇಶ್ ಮ್ಯಾಗೇರಿ, ಲಕ್ಷ್ಮವ್ವ, ಜಿಲ್ಲಾ ಸಂಯೋಜಕರಾದ ರಮೇಶ ಕೋಳೂರ, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

# ವ್ಯಕ್ತಿಯ ಪತ್ತೆಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಸೊಪ್ಪಿನಕೇರಿ ಓಣಿಯ ನಿವಾಸಿ ನಾಗರಾಜ ಮಾದೇವಪ್ಪ ಬಾಳಿಕಾಯಿ (50) ಇವರು ಅಕ್ಟೋಬರ್ 10ರಂದು ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ಹೋಗಿ ಬರುತ್ತೇನೆಂದು ಹೋಗಿ ಇದುವರೆಗೆ ಮನೆಗೆ ಬಂದಿಲ್ಲ.

ಇತ್ತೀಚೆಗೆ ಅನಾರೋಗ್ಯದ ಕಾರಣ ಪತ್ನಿ, ಮಗಳೊಂದಿಗೆ ಗದಗ ನಗರದಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ಕುಟುಂಬದವರು ಎಲ್ಲ ಕಡೆ ಹುಡುಕಾಡಿದರೂ ಯಾವುದೇ ಸುಳಿವು ಸಿಕ್ಕಿಲ್ಲ. ಈತನ ಎತ್ತರ 5 ಅಡಿ, 6 ಇಂಚ್ ಇದ್ದು, ಸಾಧಾರಣ ಮೈಕಟ್ಟು,



ಕಪ್ಪು ಕೂದಲು, ಕನ್ನಡ ಮಾತನಾಡುತ್ತಾನೆ. ಈ ಬಗ್ಗೆ ಗದಗ-ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈತನ ಬಗ್ಗೆ ಸುಳಿವು ಸಿಕ್ಕಲ್ಲಿ ಮಾಹಿತಿ ನೀಡಲು ಪ್ರಕಟಣೆ ಕೋರಿದೆ.

### ಧಾರವಾಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಅನಿಲ ಸೋರಿಕೆ ಕುರಿತು ಅಣುಕು ಪ್ರದರ್ಶನ

# ಎಲ್‌ಪಿಜಿ ಸೋರಿಕೆ ತಡೆಗಟ್ಟಲು ಜಾಗೃತಿ ವಹಿಸಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕಳೆದ ಎರಡು ವರ್ಷಗಳಿಂದ ನಗರ ಪ್ರದೇಶಗಳಲ್ಲಿ ಅಗ್ನಿ ಅವಘಡಗಳು ಹೆಚ್ಚಾಗುತ್ತಿವೆ. ಅದರಲ್ಲೂ ಚಳಿಗಾಲದಲ್ಲಿ ಅಡುಗೆ ಅನಿಲ ಸೋರಿಕೆಯಿಂದ ಅವಘಡಗಳು ಸಂಭವಿಸುತ್ತಿವೆ. ಅಡುಗೆ ಅನಿಲ ಸೋರಿಕೆ ತಡೆಗಟ್ಟಲು ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕು ಎಂದು ಧಾರವಾಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಮಠದ ಆವರಣದಲ್ಲಿ ಧಾರವಾಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಬಲವರ್ಧನೆ ಹಾಗೂ ಜಿಲ್ಲೆಯಲ್ಲಿ ಸಂಭವಿಸಬಹುದಾದ ವಿಪತ್ತುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಧಾರವಾಡ ಜಿಲ್ಲೆಯಲ್ಲಿ ಅನಿಲ ಸೋರಿಕೆಯಿಂದ ದುರಂತಗಳನ್ನು ಕಡಿಮೆಗೊಳಿಸುವ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಬಗ್ಗೆ ಏರ್ಪಡಿಸಿದ್ದ ಅಣುಕು ಪ್ರದರ್ಶನ (Offsite Mock drill) ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ 4 ವರ್ಷಗಳಿಗೊಮ್ಮೆ ಅಡುಗೆ ಅನಿಲ ಸಿಲಿಂಡರ್ ಮತ್ತು ಒಲೆಯ ಪೈಪ್ ಬದಲಾಯಿಸಬೇಕು. ಅಗ್ನಿ



ಅವಘಡಗಳು ಸಂಭವಿಸಿದಾಗ ಗಾಯಾಳುಗಳಿಗೆ ಯಾವ ರೀತಿಯಲ್ಲಿ ಪ್ರಥಮ ಚಿಕಿತ್ಸೆ ನೀಡಬೇಕು ಎಂಬುದನ್ನು ಸಹ ತಿಳಿಯಪಡಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಡುಗೆ ಅನಿಲ ಸೋರಿಕೆಯಾದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅಗ್ನಿಶಾಮಕ ದಳದ ಅಧಿಕಾರಿಗಳು ಅಣಕು ಪ್ರದರ್ಶನದ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಕೈಮಗ್ಗ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಗರಿಮಾ ಪವಾರ, ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತೀಕಾ ವರ್ಮಾ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಂ. ಹೊನಕೇರಿ, ಹುಬ್ಬಳ್ಳಿ ಶಹರ ತಹಸೀಲ್ದಾರ ಮಹೇಶ ಭಗವಂತ ಗಸ್ತೆ, ಹುಬ್ಬಳ್ಳಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ರಾಮಚಂದ್ರ ಹೊಸಮನಿ ಹಾಗೂ ಬಾಳು ಮಗಜಿಕೊಂಡಿ, ಸರ್ವಮಂಗಳಾ ಪಾಠಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಶಾಲೆಗಳ ಅಧ್ಯಾಪಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಅಡುಗೆ ಅನಿಲ ಸೋರಿಕೆ ತಡೆಗಟ್ಟುವ ಕ್ರಮಗಳ ಬಗ್ಗೆ ಅಣಕು ಪ್ರದರ್ಶನದ ಮೂಲಕ ಅಗ್ನಿಶಾಮಕ ದಳದ ಅಧಿಕಾರಿಗಳು ಸಾರ್ವಜನಿಕರಲ್ಲಿ ಅರಿವು ಮೂಡಿಸಿದ್ದಾರೆ. ಅವಘಡಗಳನ್ನು ತಡೆಗಟ್ಟಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಿದೆ. ಸಾರ್ವಜನಿಕರು ಅಡುಗೆ ಅನಿಲ ಬಳಕೆ ಮಾಡುವಾಗ ಜಾಗೃತರಾಗಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka